# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ –02 ಸಂಚಿಕೆ –277 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಕೆಎ/ಎಸ್‌ಕೆ/ಸಿಟಿಎ–874/2024–2026 | ಚಿತ್ರದುರ್ಗ | ದಿನಾಂಕ:28–05–2025 ಬುಧವಾರ | ಪುಟ: 4 | ಬೆಲೆ : ರೂ.2–00

Volume - 02 Issue - 277 | RNI No: KARKAN/2023/88462 | KA/SK/CTA-874/2024-2026 | Chitradurga | Date: 28-05-2025 Wednesday | Page: 4 | Price: Rs. 2-00



ಒಳಪುಟದ ಸುದ್ದಿಗಳು

ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿ: ಬಿ.ಟಿ.ಕುಮಾರಸ್ವಾಮಿ 2

ಕಟ್ಟಡ ನಿರ್ಮಾಣದ ಕೆಲಸ ಮಾಡುವಾಗ ಸುರಕ್ಷಾ ಕಿಟ್‌ಗಳನ್ನು ಧರಿಸಿ 3

ನೆಹರು ಅವರು ಆಧುನಿಕ ಭಾರತದ ನಿರ್ಮಾತೃ: ಸಿದ್ದರಾಮಯ್ಯ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» **ಚಿತ್ರದುರ್ಗ**



2025ನೇ ಸಾಲಿನ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಶೇ.90ಕ್ಕಿಂತ ಹೆಚ್ಚಿನ ಅಂಕ ಪಡೆದ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಮೇ31 ಅರ್ಜಿ ಸಲ್ಲಿಸಲು ಕೊನೆಯ ದಿನ. https://ksgeanews.blogspot.com ಲಿಂಕ್ ಮುಖಾಂತರ ಅರ್ಜಿಯನ್ನು ಸಲ್ಲಿಸಬಹುದು. ಆನ್‌ಲೈನ್ ಅರ್ಜಿ ಸಲ್ಲಿಸುವ ವಿಧಾನ ಮತ್ತು ಅಗತ್ಯ ಮಾಹಿತಿಗಾಗಿ KSGEA NEWS ಯೂಟ್ಯೂಬ್ ಚಾನಲ್‌ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ. ವಿದ್ಯಾರ್ಥಿಯು 2025ರ ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಪ್ರಥಮ ಪ್ರಯತ್ನದಲ್ಲಿ ತೇರ್ಗಡೆಯಾಗಿರಬೇಕು. ವಿದ್ಯಾರ್ಥಿಯ ತಂದೆ, ತಾಯಿ ರಾಜ್ಯ ಸರ್ಕಾರದ ಯಾವುದಾದರೊಂದು ಇಲಾಖೆಯಲ್ಲಿ ಖಾಯಂ ಸರ್ಕಾರಿ ನೌಕರರಾಗಿರಬೇಕು. ನಿಗಮ, ಮಂಡಳಿ, ಪ್ರಾಧಿಕಾರ, ವಿಶ್ವವಿದ್ಯಾನಿಲಯ, ಖಾಸಗಿ ಹಾಗೂ ಅನುದಾನಿತ ವಿದ್ಯಾಸಂಸ್ಥೆಗಳಲ್ಲಿ ನೇಮಕವಾಗಿರುವ ನೌಕರರು ಅರ್ಜಿ ಸಲ್ಲಿಸುವಂತಿಲ್ಲ. ಆನ್‌ಲೈನ್ ಅರ್ಜಿ ಸಲ್ಲಿಸುವಾಗ ವಿದ್ಯಾರ್ಥಿಯ ಪಾಸ್‌ಪೋರ್ಟ್ ಭಾವಚಿತ್ರ ಮತ್ತು ದೃಢೀಕೃತ ಅಂಕಪಟ್ಟಿ, ಇಲಾಖೆಯ ಸೇವಾ ಧೃಢೀಕರಣ ಪತ್ರ, ಸಂಘದ ಜಿಲ್ಲಾ, ತಾಲ್ಲೂಕು, ಯೋಜನಾ ಶಾಖೆ ಅಧ್ಯಕ್ಷರು, ಬೆಂಗಳೂರು ನಗರ ರಾಜ್ಯ ಪರಿಷತ್ ಸದಸ್ಯರಿಂದ ಪಡೆದ ದೃಢೀಕರಣ ಪತ್ರ ಸೇರಿದಂತೆ ಎಲ್ಲ ದಾಖಲೆಗಳನ್ನು ಜೆಪಿಜಿ ಫಾರ್ಮೆಟ್‌ನಲ್ಲಿ 1 ಎಂಬಿಗೆ ಮೀರದಂತೆ ಅಪ್‌ಲೋಡ್ ಮಾಡಬೇಕು. ಅರ್ಜಿ ಸಲ್ಲಿಕೆ ಯಶಸ್ವಿಗೊಂಡ ನಂತರ ನೋಂದಾಯಿತ ಇ–ಮೇಲ್‌ಗೆ ಸ್ವೀಕೃತಿ ರವಾನೆಯಾಗಲಿದೆ. ಶೇಕಡಾವಾರು ಅಂಕಗಳನ್ನು ನಿರ್ಧರಿಸಿ, ಅರ್ಜಿಯನು ಪರಿಗಣಿಸುವ ನಿರ್ಧಾರ ಸಂಘದ್ದಾಗಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ 080–22354784/83 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾಧ್ಯಕ್ಷ ಮಾಲತೇಶ್ ಮುದ್ದಜ್ಜಿ ತಿಳಿಸಿದ್ದಾರೆ.

### ಜಿಲ್ಲಾ ಹಾಪ್ ಕಾಮ್ಸ್: ಹಣ್ಣು, ತರಕಾರಿ ಮಾರಾಟಕ್ಕೆ ಮಳಿಗೆ ಲಭ್ಯ

» **ಚಿತ್ರದುರ್ಗ**

ಜಿಲ್ಲಾ ತೋಟದ ಉತ್ಪನ್ನಗಳ ಬೆಳೆಗಾರರ ಸಹಕಾರ ಮಾರಾಟ ಮತ್ತು ಸಂಸ್ಕರಣ ಸಂಘ (ಜಿಲ್ಲಾ ಹಾಪ್ ಕಾಮ್ಸ್) ಸರ್ಕಾರದ ಒಂದು ಅಂಗ ಸಂಸ್ಥೆಯಾಗಿದ್ದು, ನೇರವಾಗಿ ರೈತರಿಂದ ಖರೀದಿಸಿದ ತಾಜಾ ಹಣ್ಣು ಮತ್ತು ತರಕಾರಿಗಳನ್ನು ಸೂಕ್ತ ದರದಲ್ಲಿ ಗ್ರಾಹಕರಿಗೆ ಮಾರಾಟ ಮಾಡುವ ವ್ಯವಸ್ಥೆಯನ್ನು ಸಂಘವು ನಿರ್ವಹಿಸುತ್ತಿದೆ. ಚಿತ್ರದುರ್ಗ ನಗರದ ಮಹಾವೀರ ನಗರ, ಸರಸ್ವತಿ ಪುರಂ ಬಡಾವಣೆ, ತರಳಬಾಳು ನಗರ ಹಾಗೂ ವಿದ್ಯಾನಗರ ಸೇರಿದಂತೆ ಒಟ್ಟು 4 ಹಾಪ್‌ಕಾಮ್ಸ್ ಮಳಿಗೆಗಳು ಲಭ್ಯವಿದ್ದು, ಸಂಘದ ನಿಬಂಧನೆಗೆ ಒಳಪಟ್ಟು ಈ ಮಾರಾಟ ಮಳಿಗೆಗಳಲ್ಲಿ ಹಣ್ಣು ಮತ್ತು ತರಕಾರಿಗಳನ್ನು ಮಾರಾಟ ಮಾಡಲು ಆಸಕ್ತಿಯುಳ್ಳವರು ಜಿಲ್ಲಾ ಹಾಪ್ ಕಾಮ್ಸ್, ಚಿತ್ರದುರ್ಗ ಎಸ್.ಪಿ.ಆಫೀಸ್ ಹತ್ತಿರ, ತುರುವನೂರು ರಸ್ತೆ, ಚಿತ್ರದುರ್ಗ ಇಲ್ಲಿ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 7892174640 ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಹಾಪ್‌ಕಾಮ್ಸ್ ವ್ಯವಸ್ಥಾಪಕ ನಿರ್ದೇಶಕ ಟಿ.ಆರ್.ಯಶವಂತ ಕುಮಾರ್ ತಿಳಿಸಿದ್ದಾರೆ.

### ದರಪಟ್ಟಿ ಆಹ್ವಾನ

» **ಚಿತ್ರದುರ್ಗ**

ಲಿಂಗತ್ವ ಅಲ್ಪಸಂಖ್ಯಾತರ ಮೂಲ ಹಂತದ ಸಮೀಕ್ಷೆಯನ್ನು ಆನ್‌ಲೈನ್ ಮೂಲಕ ಟ್ಯಾಬ್ ಬಳಸಿ ಸಮೀಕ್ಷೆ ಕಾರ್ಯ ನಡೆಸಲು ಉದ್ದೇಶಿಸಿದ್ದು, ಟ್ಯಾಬ್ ಮತ್ತು ಸಿಮ್‌ಗಳನ್ನು ಬಾಡಿಗೆ ಆಧಾರದ ಮೇಲೆ ಪಡೆಯಲು ದರಪಟ್ಟಿಯನ್ನು ಆಸಕ್ತ ಸಂಸ್ಥೆಗಳಿಂದ ಕರೆಯಲಾಗಿದೆ. ಜೂನ್ 09 ದರಪಟ್ಟಿ ಸಲ್ಲಿಸಲು ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ಉಪನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮ ಕಚೇರಿ, ಚಿತ್ರದುರ್ಗ, ದೂರವಾಣಿ ಸಂಖ್ಯೆ 7019967954 ಗೆ ಸಂಪರ್ಕಿಸಬಹುದು.

# ನನ್ನ ಬರವಣಿಗೆಯ ಗುಟ್ಟೇ ಆರೋಗ್ಯ

## ಎಲ್ಲಿಯವರೆಗೂ ಬರೆಯುತ್ತೇನೋ ಅಲ್ಲಿಯವರೆಗೂ ಬದುಕಿರುತ್ತೇನೆ: ಬಿ.ಎಲ್.ವೇಣು

» **ಚಿತ್ರದುರ್ಗ**

ಬರವಣಿಗೆ ನನ್ನ ಜೀವಾಳ, ನಾನು ಬರೆಯುತ್ತಿದ್ದರೆ ನಾನು ಚನ್ನಾಗಿ ಇರುತ್ತೇನೆ, ಇಲ್ಲವಾದರೆ ಏರು ಪೇರಾಗುತ್ತದೆ ಎಂದು ತಮ್ಮ ಮನದಾಳದ ಮಾತನ್ನು ಹೇಳಿದವರು ಸಾಹಿತಿಗಳು, ಚಲನಚಿತ್ರ ಸಂಭಾಷಣಾಕಾರರಾದ ಬಿ.ಎಲ್.ವೇಣು ರವರು.

ಚಿತ್ರದುರ್ಗ ನಗರದ ಕೆಳಗೋಟೆಯ ಭುವನೇಶ್ವರಿ ವೃತ್ತದ ಬಳಿಯಲ್ಲಿನ ಅವರ ನಿವಾಸದಲ್ಲಿ ಇಂದು ನಡೆದ ಅವರ 80ನೇ ಹುಟ್ಟುಹಬ್ಬದಲ್ಲಿ ಸಮಾರಂಭದಲ್ಲಿ ಭಾಗವಹಿಸಿದ್ದ ಸೇಹಿತರು, ಅಭಿಮಾನಿಗಳು, ಹಿತೈಷಿಗಳಿಂದ ಹುಟ್ಟು ಹಬ್ಬದ ಶುಭ ಹಾರೈಕೆಗಳನ್ನು ಸ್ವೀಕಾರ ಮಾಡಿದ ನಂತರ ಮಾತನಾಡಿದ ಅವರು, ಜನತೆ ನನ್ನನ್ನು ಬಹಳಷ್ಟು ಪ್ರೀತಿ ಮಾಡುತ್ತಾರೆ ಎಂಬುದು ಸಾಹಿತ್ಯ ಸಮ್ಮೇಳನದಲ್ಲಿ ನನ್ನನು ಅಧ್ಯಕ್ಷನನ್ನಾಗಿ ಮಾಡಿ ಸಾಹಿತ್ಯ ಸಮ್ಮೇಳನವನ್ನು ಚನ್ನಾಗಿ ಮಾಡಿದ್ದೀರಾ, ಅದನ್ನು ನಾನು ನೋಡಿದ್ದೇನೆ, ಆದರೆ ನಾನು ಸಾಸಿವೆ ಕಾಳಿನಷ್ಟು ಮಾತ್ರ ಸಾಧನೆಯನ್ನು ಮಾಡಿದ್ದೆನೆ, ಆದರೆ ನೀವುಗಳು ಸಾಗರದಷ್ಟು ಪ್ರೀತಿಯನ್ನು ತೋರಿಸಿದ್ದೀರಾ, ಇದು ನನ್ನ ಪುಣ್ಯವಾಗಿದೆ. ನನ್ನ ಎಲ್ಲಾ ಕಾರ್ಯಕ್ರಮಗಳ ಹಿಂದೆ ಕಾಂತರಾಜ್‌ರವರ ಬೆಂಬಲ ಇದೆ. ನನ್ನ ಹೆಸರಿನಲ್ಲಿ ಚಿತ್ರದುರ್ಗದಲ್ಲಿ ವೃತ್ತ ಎಂದು ಏನಾದರೂ ಮಾಡಿದ್ದರೆ ಅದು ಕಾಂತರಾಜ್ ರವರ ಕೂಡುಗೆಯಾಗಿದೆ ಎಂದರು.

ಚಿತ್ರದುರ್ಗ ಅಲ್ಲದೆ ಬೇರೆ ಕಡೆಯಿಂದಲೂ ಸಹಾ ಜನತೆ ನನ್ನ ಮೇಲೆ ಅಭಿಮಾನವನ್ನು ತೋರಿಸುತ್ತಿದ್ದಾರೆ. ಇದು ನನ್ನ ಪುಣ್ಯವಾಗಿದೆ.



ನಾನು ಇನ್ನೂ ಬರೆಯುವುದು ಬಹಳಷ್ಟು ಇದೆ. ಸಾಹಿತಿಗಳಾದ ತೆಲಗಾವಿ ಯವರು ಹೇಳುತ್ತಿರುತ್ತಾರೆ ನಾಯಕರ ಎಲ್ಲಾ ಪಾಳೇಗಾರರ ಬಗ್ಗೆಯೂ ಸಹಾ ಬರೆದು ಮುಗಿಸಿ ಎಂದಿದ್ದಾರೆ. ಈಗಾಗಲೇ ಸಾಲು ಸಾಲು ಕಾದಂಬರಿಗಳನ್ನು ಪಾಳೇಗಾರರ ಬಗ್ಗೆ ಬರೆಯಲಾಗಿದೆ. ಅದರೆ ದಲಿತ ಸಮಸ್ಯೆಗಳ ಬಗ್ಗೆ ಬರೆದಾಗ ನನಗೆ ಇಷ್ಠವಾಗುವುದು ಇದು ನನಗೆ ವೈಯುತ್ತಿಕವಾಗಿ ಇದಕ್ಕೆ ನನಗೆ ಹೆಚ್ಚಿನ ಪ್ರಮಾಣದಲ್ಲಿ ಬಹುಮಾನಗಳು ಬಂದಿವೆ. ಚಿತ್ರದುರ್ಗದಲ್ಲಿ ನಾನು ಹುಟ್ಟಿ ಬೆಳದಿದ್ದೆನೆ ಕೋಟೆಯಲ್ಲಿ ತಿರುಗಾಡಿದ್ದೇನೆ, ಚರಿತ್ರೆ ಗೊತ್ತಿರುವುದರಿಂದ ಈ ದಿಸೆಯಲ್ಲಿಯೂ ಸಹಾ ನಾನು ಕೆಲಸವನ್ನು ಮಾಡಿದ್ದೇನೆ, ಐತಿಹಾಸಿಕ ಕಾದಂಬರಿಗಳು ಸಹಾ ನನಗೆ ಹೆಚ್ಚಿನ ಮನ್ನಣೆಯನ್ನು ತಂದು ಕೊಟ್ಟಿವೆ. ಇದ್ದರೊಂದಿಗೆ ಚಿತ್ರದುರ್ಗದ ಐತಿಹಾಸಿಕ ಕಾದಂಬರಿಗಳನ್ನು ಬರೆದಿರುವುದರಿಂದ ನಾನು ಜನಪ್ರಿಯತೆಯನ್ನು ಗಳಿಸಿದ್ದೇನೆ ಎಂದು ವೇಣು ತಿಳಿಸಿದರು.

ಅನಕ್ಷರಸ್ಥರನ್ನು ಸಹಾ ಮುಟ್ಟುವಂತಹ ಕ್ಷೇತ್ರವಾದ ಸಿನಿಮಾ ರಂಗದಲ್ಲಿಯೂ ಸಹಾ ನಾನು ಕೆಲಸವನ್ನು ಮಾಡಿದ್ದೇನೆ ಇದರಿಂದ ಹೆಚ್ಚಿನ ಪ್ರೀತಿ ಸಿಕ್ಕಿದೆ. ನನ್ನ ಆರೋಗ್ಯದ ಗುಟ್ಟು ಎಂದರೆ ಬರವಣಿಗೆ, ಈಗಲೂ ಸಹಾ ಏನಾದರೂ ಬರೆಯುತ್ತೇನೆ ಇಲ್ಲವೇ ಓದುತ್ತೇನೆ, ಇದೇ ನನಗೆ ಕೆಲಸವಾಗಿದೆ. ಮುಂದೆಯೂ ಸಹಾ ಏನಾದರೂ ಬರೆಯುತ್ತೇನೆ, ನನ್ನ ಬರವಣಿಗೆಯ ಗುಟ್ಟೇ ಆರೋಗ್ಯವಾಗಿದೆ. ಎಲ್ಲಿಯವರೆಗೂ ಬರೆಯುತ್ತೇನೋ ಅಲ್ಲಿಯವರೆಗೂ ಬದುಕಿರುತ್ತೇನೆ ಎಂಬ ನಂಬಿಕೆ ಇದೆ. ನಿಮ್ಮ ಪ್ರೀತಿ ವಿಶ್ವಾಸ ನನ್ನ ಮೇಲೆ ಇರಲಿ ಅದೇ ನನ್ನ ಆಯಸ್ಸನ್ನು ವೃದ್ಧಿ ಮಾಡುತ್ತದೆ ಎಂದು ವೇಣು ನುಡಿದರು.

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರು ನಗರಾಭೀವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ತಾಜ್‌ಪೀರ್ ಮಾತನಾಡಿ, ವೇಣುರವರು ಬರೆದಿರುವ ಕಾದಂಬರಿಗಳಲ್ಲಿ ಉತ್ತಮವಾದ ಕಾದಂಬರಿಯನ್ನು ಆಯ್ಕೆ ಮಾಡಿ ಅದನ್ನು ಆಂಗ್ಲ ಬಾಷೆಗೆ ತರ್ಜಿಮೆ ಮಾಡುವುದರ ಮೂಲಕ ಇವರ ಜನಪ್ರಿಯತೆ ದೇಶದಾದ್ಯಂತ ಹರಡುವಂತೆ ಆಗಬೇಕಿದೆ ಇದಕ್ಕೆ ಎಲ್ಲರು ಸಹಾ ಸಹಕಾರವನ್ನು ನೀಡಲಿದ್ದಾರೆ ಎಂದರು.

ಜೆಡಿಎಸ್.ಮುಖಂಡರು, ನಗರಸಭೆಯ ಮಾಜಿ ಅಧ್ಯಕ್ಷರಾದ ಬಿ.ಕಾಂತರಾಜ್ ಮಾತನಾಡಿ ವೇಣು ರವರು ನಮ್ಮ ದುರ್ಗದ ಅಸ್ತಿ, ಇವರು ನಮ್ಮ ದುರ್ಗದಲ್ಲಿ ಇರುವುದು ನಮ್ಮೆಲ್ಲರ ಪುಣ್ಯವಾಗಿದೆ. ಭಗವಂತ ಇವರಿಗೆ ಆರೋಗ್ಯವನ್ನು ನೀಡಿ ಇವರ ಕೈಯಿಂದ ಮತ್ತಷ್ಟು ಕಾದಂಬರಿಗಳು ಹೂರ ಬರುವಂತೆ ಮಾಡಬೇಕಿದೆ ಎಂದು ತಿಳಿಸಿದರು.

ಮದಕರಿ ಸಾಂಸ್ಕೃತಿಕ ಕೇಂದ್ರದ ಗೋಪಾಲಸ್ವಾಮಿ ನಾಯಕ್ ಮಾತನಾಡಿ ವೇಣುರವರಿಗೆ ಈಗ 80ರ ಸಂಭ್ರಮ ಈಗ ಸಾಂಕೇತಿಕವಾಗಿ ಅವರ ಹುಟ್ಟು ಹಬ್ಬವನ್ನು ಆಚರಣೆ ಮಾಡಲಾಗಿದೆ. ಮುಂದಿನ ದಿನದಲ್ಲಿ ವೇಣು 80ರ ಸಂಭ್ರಮವನ್ನು ದೊಡ್ಡದಾಗಿ ತರಾಸು ರಂಗಮಂದಿರದಲ್ಲಿ ಏರ್ಪಡಿಸಲಾಗುವುದು ಎಂದರು.

ಕಾರ್ಯಕ್ರಮದಲ್ಲಿ ಮದಕರಿ ನಾಯಕ ವಿದ್ಯಾ ಸಂಸ್ಥೆಯ ಅಧ್ಯಕ್ಷ ಸಂದೀಪ್. ಕನ್ನಡ ಸಾಹಿತ್ಯ ಪರಿಷತ್‌ನ ಅಧ್ಯಕ್ಷರಾದ ಶಿವಸ್ವಾಮಿ, ತಾಲ್ಲೂಕು ಅಧ್ಯಕ್ಷರಾದ ಪ್ರಶಾಂತ್, ಸೃಷ್ಟಿಸಾಗರ ಪ್ರಕಾಶನದ ಮೇಘಗಂಗಾಧರ ನಾಯ್ಕ್, ನಗರಸಭೆಯ ಮಾಜಿ ಅಧ್ಯಕ್ಷರಾದ ಮೈಲಾರಪ್ಪ, ಕಾಂಗ್ರೆಸ್ ಮುಖಂಡರಾದ ಸಂಪತ್ ಕುಮಾರ್, ಅಂಜಿನಪ್ಪ, ಖುದ್ದುಸ್, ತಿಪ್ಪೇಸ್ವಾಮಿ, ಕುಮಾರ್ ಗೌಡ, ಶಿವಕುಮಾರ್, ಭವಾನಿ ಮಂಜುನಾಥ್, ಪತ್ರಕರ್ತರಾದ ಬಸವರಾಜು, ಕಿರಣ್, ಸಿದ್ದರಾಜು, ಲಕ್ಷ್ಮಣ್, ಮಹೇಶ್‌ಬಾಬು, ಅಹೋಬಳಪತಿ. ಹೆಂಜಾರಪ್ಪ, ಚಂದ್ರಪ್ಪ, ದ್ವಾರಕನಾಥ್, ಸೋಮಶೇಖರ್ ಶ್ರೀನಿವಾಸ್, ಪ್ರಹ್ಲಾದ್. ಮಂಜುನಾಥ್ ಅರುಣ್ ಕುಮಾರ್, ಮದಕರಿನಾಯಕ ವಂಶಸ್ಥರಾದ ರಾಜಮದಕರಿನಾಯಕ ಸೇರಿದಂತೆ ವೇಣುರವರ ಸೇಹಿತರು, ಅಭಿಮಾನಿಗಳು, ಹಿತೈಷಿಗಳಿಂದ ಹುಟ್ಟು ಹಬ್ಬಕ್ಕೆ ಶುಭ ಹಾರೈಸಿದರು.

# ಪರಿಶಿಷ್ಟ ಜಾತಿ ಒಳ ಮೀಸಲಾತಿ: ಸಮೀಕ್ಷಾ ಕಾರ್ಯ ಅವಧಿ ಜೂ.01ರವರೆಗೆ ಮರು ವಿಸ್ತರಣೆ

» **ಚಿತ್ರದುರ್ಗ**

ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಕುರಿತು ನ್ಯಾಯಮೂರ್ತಿ ಡಾ.ಹೆಚ್. ಎನ್.ನಾಗಮೋಹನದಾಸ್ ಅವರ ಏಕ ಸದಸ್ಯ ವಿಚಾರಣಾ ಆಯೋಗವನ್ನು ಸರ್ಕಾರ ರಚಿಸಿದ್ದು, ಪರಿಶಿಷ್ಟ ಜಾತಿ ಒಳ ಮೀಸಲಾತಿ ವರ್ಗೀಕರಣ ಸಂಬಂಧದ ವಿವಿಧ ಅಂಶಗಳ ಬಗ್ಗೆ ದತ್ತಾಂಶ ಸಂಗ್ರಹಣೆಗಾಗಿ ಜಿಲ್ಲೆಯಲ್ಲಿ ನಡೆದಿರುವ ಸಮೀಕ್ಷೆ ಕಾರ್ಯದ ಅವಧಿಯನ್ನು ಜೂನ್ 01 ರವರೆಗೆ ಮರು ವಿಸ್ತರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದ್ದಾರೆ.

ಪರಿಶಿಷ್ಟ ಜಾತಿ ಒಳಮೀಸಲಾತಿ ಸಂಬಂಧ ಪರಿಶಿಷ್ಟ ಜಾತಿ ಕುಟುಂಬಗಳ ಸಮೀಕ್ಷೆ ಕಾರ್ಯ ಕಳೆದ ಮೇ 05 ರಿಂದ ಆರಂಭಗೊಂಡಿದ್ದು,



ಕಾರ್ಯದರ್ಶಿಗಳು, ಏಕ ಸದಸ್ಯ ಆಯೋಗ, ಬೆಂಗಳೂರು ಅವರ ಆದೇಶದಂತೆ ಮನೆ ಮನೆ ಭೇಟಿ ನೀಡಿ ಸಮೀಕ್ಷೆ ನಡೆಸುವ ಕಾರ್ಯವನ್ನು ಮೇ29 ರವರೆಗೆ ಕೈಗೊಳ್ಳಲು ಮರು ವಿಸ್ತರಿಸಲಾಗಿದೆ.

ಪರಿಷ್ಕೃತ ವೇಳಾಪಟ್ಟಿಯಂತೆ ಮೊದಲನೆ ಹಂತದಲ್ಲಿ ಮನೆ ಮನೆ ಭೇಟಿ ನೀಡಿ ಕೈಗೊಳ್ಳುವ ಸಮೀಕ್ಷಾ ಕಾರ್ಯವು ಮೇ. 29 ರವರೆಗೆ ಜರುಗಲಿದೆ. ಎರಡನೆ ಹಂತದಲ್ಲಿ, ಸಮೀಕ್ಷೆ ಬ್ಲಾಕ್‌ಗಳಲ್ಲಿ ವಿಶೇಷ ಶಿಬಿರಗಳನ್ನು ಕೈಗೊಂಡು, ಮನೆ–ಮನೆ ಭೇಟಿ ಅವಧಿಯಲ್ಲಿ ಬಿಟ್ಟುಹೋದ ಪರಿಶಿಷ್ಟ ಜಾತಿ ಕುಟುಂಬಗಳ ಮಾಹಿತಿಯನ್ನು ಸಂಗ್ರಹಿಸುವ ಕಾರ್ಯ ಜೂನ್ 01 ರವರೆಗೆ ಜರುಗಲಿದ್ದು, ಮೂರನೆ ಹಂತದಲ್ಲಿ ಸ್ವಯಂ ಘೋಷಣೆ ಮಾಡಿ, ಆನ್‌ಲೈನ್ ಮೂಲಕ ಸಮೀಕ್ಷೆ ಕಾರ್ಯವು ಕೂಡ ಜೂನ್ 01 ರವರೆಗೆ ಜರುಗಲಿದೆ.

ಪರಿಷ್ಕೃತ ವೇಳಾಪಟ್ಟಿಯನ್ವಯ ಸಮೀಕ್ಷೆ ಸಂದರ್ಭದಲ್ಲಿ ಗಣತಿದಾರರಿಗೆ ಮತ್ತು ಮೇಲ್ವಿಚಾರಕರಿಗೆ ಕುಟುಂಬದ ಸಂಪೂರ್ಣ ಮಾಹಿತಿ ನೀಡಿ ಸಮೀಕ್ಷಾ ಕಾರ್ಯವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಪ್ರಕಟಣೆಯಲ್ಲಿ ಕೋರಿದ್ದಾರೆ.

### ಒಳಮೀಸಲಾತಿ ಸಮೀಕ್ಷೆ ಕಾರ್ಯ : ಲೋಪವಾಗದಂತೆ ಕಾರ್ಯನಿರ್ವಹಿಸಿ



**ಚಳ್ಳಕೆರೆ:** ಒಳಮೀಸಲಾತಿ ಜಾರಿಕುರಿತಂತೆ ರಾಜ್ಯ ಸರ್ಕಾರ ಮೇ.5ರಿಂದ ಈಗಾಗಲೇ ಮನೆ, ಮನೆಗೂ ಸಮೀಕ್ಷಾ ಕಾರ್ಯಕ್ಕೆ ಚಾಲನೆ ನೀಡಿದ್ದು, ಪರಿಶಿಷ್ಟ ಜಾತಿಯ ಜನಾಂಗ ತಮ್ಮ ಮಾಹಿತಿಯನ್ನು ನಿಖರವಾಗಿ ನೀಡಿ ಸಮೀಕ್ಷೆ ಯಶಸ್ವಿಗೆ ಸಹಕರಿಸುವಂತೆ ತಹಶೀಲ್ದಾರ್ ರೇಹಾನ್‌ಪಾಷ ಮನವಿ ಮಾಡಿದರು. ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ಜಾತಿಗಣತಿ ಕುರಿತಂತೆ ಕೆಲವೊಂದು ದಲಿತ ಮುಖಂಡರು ಅಸಮದಾನ ವ್ಯಕ್ತಪಡಿಸಿದ ಹಿನ್ನೆಲೆಯಲ್ಲಿ ಸಂಬಂಧಪಟ್ಟ ಅಧಿಕಾರಿಗಳ ಸಮಕ್ಷಮದಲ್ಲಿ ತಹಶೀಲ್ದಾರ್ ಸಭೆ ಕರೆದು ನಿರ್ದೇಶನ ನೀಡಿದರು. ಸರ್ಕಾರ ಈಗಾಗಲೇ ಜೂನ್1ರ ತನಕ ದಿನಾಂಕವನ್ನು ವಿಸ್ತರಣೆ ಮಾಡಿದ್ದು, ಗಣತಿಗೆ ನಿಯೋಜನೆಗೊಂಡ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ನಿಗದಿತ ಅವಧಿಯಲ್ಲಿ ಸಮೀಕ್ಷೆ ಕಾರ್ಯವನ್ನು ಪೂರೈಸಬೇಕೆಂದರು.

ಪುಟ 2

## ಪ್ರಮುಖ ಸುದ್ದಿ

# ವಿವಿಧ ಬೇಡಿಕೆಗೆ ಆಗ್ರಹಿಸಿ ಪೌರ ಕಾರ್ಮಿಕರ ಪ್ರತಿಭಟನೆ

» **ಹೊಳಲ್ಕೆರೆ**

ಪೌರಸೇವಾ ನೌಕರರ ನಾನಾ ಬೇಡಿಕೆ ಈಡೇರಿಸಬೇಕೆಂದು ಆಗ್ರಹಿಸಿದ ಹೊಳಲ್ಕೆರೆ ಪುರಸಭೆ ಪೌರಸೇವಾ ನೌಕರರು ಕರ್ತವ್ಯ ನಿಲ್ಲಿಸಿ ಮಂಗಳವಾರ ಪುರಸಭೆ ಕಚೇರಿ ಎದುರು ಅನಿಧಿಷ್ಠಾವಧಿ ಪ್ರತಿಭಟನೆ ನಡೆಸಿದರು.

ಪ್ರತಿಭಟನೆ ನೇತೃತ್ವ ವಹಿಸಿದ ಪೌರಸೇವಾ ನೌಕರ ರಂಗಸ್ವಾಮಿ ಮಾತನಾಡಿ, ರಾಜ್ಯ ಸರಕಾರ ಪೌರ ಸೇವಾ ನೌಕರ ಬೇಡಿಕೆ ಈಡೇರಿಸುವ ತನಕ ಪುರಸಭೆಯ ವ್ಯಾಪ್ತಿಯಲ್ಲಿ ಯಾವುದೇ ಕರ್ತವ್ಯ ನಿರ್ವಹಿಸುವುದಿಲ್ಲ. ಪಟ್ಟಣದ ಸ್ವಚ್ಚತೆ, ಕುಡಿಯುವ ನೀರು, ಕೊಳವೆ ಭಾವಿ ನೀರು ಪೂರೈಕೆ, ಬೀದಿ ದೀಪದ ನಿರ್ವಹಣೆ, ಕಸ ವಿಲೆವರಿ ವಾಹನ ಚಾಲನೆ ನಿಲ್ಲಿಸಿದೆ. ಕಳೆದ 20 ವರ್ಷಗಳಿಂದ ಪುರಸಭೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದರೂ ಸರಕಾರ ಸಮಾನ ವೇತನ ಭತ್ಯೆಗಳನ್ನು ಕೊಡುತ್ತಿಲ್ಲ. ಸರಕಾರ ಕೂಡಲೆ ಕ್ರಮ ವಹಿಸಬೇಕು. ನಿರ್ಲಕ್ಷ್ಯಿಸಿದಲ್ಲಿ ಪ್ರತಿಭಟನೆಯನ್ನು ಇನ್ನೋಷ್ಟು ತೀವ್ರಗೊಳಿಸುತ್ತೇವೆಂದು ತಿಳಿಸಿದರು.



ಪೌರ ಸೇವಾ ನೌಕರ ಸನಾಹುಲ್ಲ ಮಾತನಾಡಿ, ಕಳೆದ 20 ವರ್ಷಗಳಿಂದ ನೀರು ಪೂರೈಕೆ ನೌಕರರನಾಗಿ ಕೆಲಸ ಮಾಡುತ್ತಿದ್ದೇವೆ. ವಾಹನ ಚಾಲಕರು, ವಿದ್ಯುತ್ ದೀಪ ನಿರ್ವಹಣೆ, ಕಸ ತೆಗೆಯುವವರು ವೇತನವಿಲ್ಲದೆ ಸಂಕಷ್ಟದ ಬದುಕು ನಡೆಸುತ್ತಿದ್ದೇವೆ. ಸರಕಾರ ಕೊಡುವ ವೇತನ ಕುಟುಂಬ ನಿರ್ವಹಣೆಗೆ ಆಗುತ್ತಿಲ್ಲ. ಹಾಗಾಗಿ ಸರಕಾರಿ ನೌಕರರನ್ನಾಗಿ ಪೌರ ಸೇವಾ ನೌಕರರನ್ನು ಪರಿಗಣಿಸಿ ಸಕಾಲಕ್ಕೆ ವೇತನ ಭತ್ಯೆ ನೀಡಬೇಕೆಂದರು.

**ಸಂಘದ ಬೇಡಿಕೆಗಳು :** ರಾಜ್ಯದ ಎಲ್ಲಾ ನಗರ ಸ್ಥಳೀಯ ಸಂಸ್ಥೆ ನೌಕರರನ್ನು ರಾಜ್ಯ ಸರ್ಕಾರಿ ನೌಕರರೆಂದು ಪರಿಗಣಿಸಿ ಜ್ಯೋತಿ ಸಂಜೀವಿನಿ, ಕೆಜಿಐಡಿ, ಸೇರಿದಂತೆ ಸರ್ಕಾರಿ ನೌಕರ ಪಡೆಯುವ ಎಲ್ಲಾ ಸೌಲಭ್ಯಗಳನ್ನು ನೀಡಬೇಕು.ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಅಡಿಯಲ್ಲಿ ಕೆಲಸ ನಿರ್ವಹಿಸುತ್ತಿರುವ ನೀರು ಸರಬರಾಜು ಸಹಾಯಕರು, ಚಾಲಕರು, ಲೋಡರ್ಸ್, ಕ್ಲೀನರ್ಸ್, ಗಾರ್ಡನರ್, ಸ್ಯಾನಿಟರಿ ಸೂಪರ್‌ವೈಜರ್, ಯುಜಿಡಿ ಸಹಾಯಕರು ಸೇರಿದಂತೆ ವಿವಿಧ ವೃಂದದ ಹೊರಗುತ್ತಿಗೆ ನೌಕರರನ್ನು ನೇರಪಾವತಿಗೆ ಒಳಪಡಿಸುವುದು.

ಪುಟ 2

> ಪೌರಸೇವಾ ನೌಕರರ ಹೋರಾಟಕ್ಕೆ ಪುರಸಭೆಯ ಎಲ್ಲಾ ಸದಸ್ಯರು ಬೇಂಬಲಿಸಿದ್ದೇವೆ. ಪೌರಸೇವಾ ನೌಕರರ ಬೇಡಿಕೆ ಈಡೇರಿಸಲು ಸರಕಾರ ಕ್ರಮ ವಹಿಸಬೇಕು. ಅವರನ್ನು ಖಾಯಂ ಗೊಳಿಸಬೇಕು. ಪ್ರತಿಭಟನೆ ಯಿಂದ ಪುರಸಭೆ ಸ್ವಚ್ಚತೆ, ನೀರು ಪೂರೈಕೆ, ವಿದ್ಯುತ್ ನಿರ್ವಹಣೆಗೆ ತೊಂದರೆಯಾಗಲಿದೆ. ಜನರು ಪ್ರತಿಭಟನೆ ಮುಗಿಯುವ ತನಕ ತಾಳ್ಮೆಯಿಂದ ಇರಬೇಕು.
>
> » **ವಿಜಯಸಿಂಹ ಖಾಟ್ರೋತ್. ಅಧ್ಯಕ್ಷರು ಪುರಸಭೆ ಹೊಳಲ್ಕೆರೆ**

> ಹತ್ತಾರು ವರ್ಷಗಳಿಂದ ಪುರಸಭೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೌರ ಸೇವಾ ನೌಕರರ ಸಮಸ್ಯೆಯನ್ನು ಪರಿಹರಿಸಲು ಸರಕಾರ ಒತ್ತು ನೀಡಬೇಕು. ಪೌರ ಕಾರ್ಮಿಕ ಪ್ರತಿಭಟನೆ ಜನರ ಮೇಲೆ ಪರಿಣಾಮ ಬೀರಲಿದೆ. ಸರಕಾರ ಪೌರ ಸೇವಾ ನೌಕರರ ಸಮಸ್ಯೆ ಪರಿಹರಿಸಬೇಕು.
>
> » **ಹೆಚ್.ಆರ್.ನಾಗರತ್ನವೇದಮೂರ್ತಿ ಉಪಾಧ್ಯಕ್ಷರು. ಪುರಸಭೆ ಹೊಳಲ್ಕೆರೆ.**

## ಫಾಸ್ಟ್ ನ್ಯೂಸ್

### ಬೇಡಿಕೆಗೆ ಆಗ್ರಹಿಸಿ ಪೌರ ಕಾರ್ಮಿಕರ ಪ್ರತಿಭಟನೆ

» ಮೊದಲ ಪುಟದಿಂದ

ದಿನಗೂಲಿ, ಕ್ಷೇಮಾಭಿವೃದ್ಧಿ ಸಮಾನ ಕೆಲಸಕ್ಕೆ ಸಮಾನ ವೇತನ ನೌಕರರನ್ನು ಖಾಯಂ ಮಾಡುವುದು. ಎಲ್ಲಾ ನೌಕರರಿಗೆ ಎಸ್.ಎಫ್.ಸಿ ಮುಕ್ತ ನಿಧಿಯಿಂದ ವೇತನ ನೀಡುವುದು. ಪ್ರತಿಭಟನೆಯಲ್ಲಿ ಕಛೇರಿ ವ್ಯವಸ್ಥಾಕಿ ರಾಧ.ಆರ್, ಸಿಬ್ಬಂದಿಗಳಾದ ಮಹೇಶ್ವರಪ್ಪ, ದೇವರಾಜ್, ಗಂಗಾಧರ್, ಹರೀಶ್, ರಾಮಚಂದ್ರಪ್ಪ, ಲೋಕೇಶ್, ಗಣೇಶ್, ಬಸವರಾಜಪ್ಪ, ಕಮಲಮ್ಮ ನೀರು ಸರಬರಾಜು ಸಹಾಯಕರು, ಪೌರಕಾರ್ಮಿಕರು, ಚಾಲಕರು ಲೋಡರ್ಸ್, ಕ್ಲೀನರ್ಸ್ ಸ್ಯಾನಿಟರಿ ಸೂಪರ್‌ವೈಜರ್, ಹೊರಗುತ್ತಿಗೆ ಪಲ್ಗೊಂಡಿದ್ದರು. ಪೌರಕಾರ್ಮಿಕರು ಇದ್ದರು.

### ಒಳಮೀಸಲಾತಿ ಸಮೀಕ್ಷೆ ಕಾರ್ಯ: ಲೋಪವಾಗದಂತೆ ಕಾರ್ಯನಿರ್ವಹಿಸಿ

» ಮೊದಲ ಪುಟದಿಂದ

ಸಮಾಜ ಕಲ್ಯಾಣ ಅಧಿಕಾರಿ ದೇವ್ಲಾನಾಯ್ಕ ಮಾತನಾಡಿ, ಪರಿಶಿಷ್ಟ ಜಾತಿಯ ವಿವಿಧ ಪಂಗಡಗಳ ದಾಖಲಾತಿ ಕುರಿತಂತೆ ಕೆಲವು ಮುಖಂಡರು ಆಕ್ಷೇಪ ವ್ಯಕ್ತಿದ್ಧಾರೆ. ನ್ಯಾಯಮೂರ್ತಿ ನಾಗಮೋಹನ್‌ದಾಸ್ ವರದಿ ಅನ್ವಯ ಸರ್ಕಾರ ಸಮೀಕ್ಷೆಗೆ ಅವಕಾಶ ಮಾಡಿದೆ. ಸರ್ಕಾರದ ನಿಯಮಗಳ ಅನುಸಾರ ಸಮೀಕ್ಷೆ ಕಾರ್ಯ ನಡೆಯುತ್ತಿದೆ. ಯಾವುದಾದರೂ ಲೋಪದೋಷಗಳಿದ್ದಲ್ಲಿ ಮಾಹಿತಿ ನೀಡಿದರೆ ಸರಿಪಡಿಸುವ ಭರವಸೆ ನೀಡಿದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್, ಅಕ್ಷರದಾಸೋಹ ಅಧಿಕಾರಿ ಮಂಜುನಾಥಸ್ವಾಮಿ, ನಗರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ಟಿ.ಮಲ್ಲಿಕಾರ್ಜುನ್, ನಾಮಿನಿ ಸದಸ್ಯ ಆರ್.ವೀರಭದ್ರಪ್ಪ, ದಲಿತ ಸಂಘಟನೆಗಳ ಹಿರಿಯ ಮುಖಂಡ ಟಿ.ವಿಜಯಕುಮಾರ್, ಹೊಟ್ಟೆಪ್ಪನಹಳ್ಳಿಕಾಂತರಾಜ್, ನಾಗರಾಜು, ಕರೀಕೆರೆತಿಪ್ಪೇಸ್ವಾಮಿ, ಹೊನ್ನೂರುಸ್ವಾಮಿ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

### ಹೊಸದುರ್ಗ: ವಿದ್ಯಾರ್ಥಿ ನಿಲಯ ಪ್ರವೇಶಕ್ಕೆ ಅರ್ಜಿ

» ಚಿತ್ರದುರ್ಗ

2025–26ನೇ ಸಾಲಿಗೆ ಚಿತ್ರದುರ್ಗ ಜಿಲ್ಲೆಯ ಹೊಸದುರ್ಗ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ನಿಲಯಗಳಲ್ಲಿ ಖಾಲಿ ಇರುವ ಸ್ಥಾನಗಳಿಗೆ ಪ್ರವೇಶಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ವಿದ್ಯಾರ್ಥಿ ನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ ಲೇಖನಾ ಸಾಮಗ್ರಿ ಹಾಗೂ ಇತರ ಮೂಲಭೂತ ಸೌಲಭ್ಯ ಮತ್ತು ಉತ್ತಮವಾದ ಶೈಕ್ಷಣಿಕ ಮಾರ್ಗದರ್ಶನ ನೀಡಲಾಗುವುದು. ಈ ಎಲ್ಲಾ ವಿದ್ಯಾರ್ಥಿ ನಿಲಯಗಳಲ್ಲಿ ಮೀಸಲಾತಿ ನಿಯಮಾನುಸಾರ ಸ್ಥಾನಗಳನ್ನು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ಮತ್ತು ಇತರೆ ಗುಂಪುಗಳಿಗೆ ನೀಡಲಾಗುವುದು. ಈ ಸಂಬಂಧ 05 ರಿಂದ 10 ನೇ ತರಗತಿವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿದ್ಯಾರ್ಥಿಗಳು ಆನ್‌ಲೈನ್ ಮೂಲಕ ವೆಬ್ ಸೈಟ್ http:// www.sw.kar.nic.in.com/ ನಲ್ಲಿ ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳು ಅರ್ಹ ದಾಖಲಾತಿಗಳೊಂದಿಗೆ ಅರ್ಜಿ ಸಲ್ಲಿಸಬಹುದು. ವಿದ್ಯಾರ್ಥಿಗಳ ಆಯ್ಕೆಯನ್ನು ಕೌನ್ಸಿಲಿಂಗ್ ಮೂಲಕ ನಡೆಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹೊಸದುರ್ಗ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು (ಗ್ರೇಡ್–2) ರವರ ಕಚೇರಿಯನ್ನು ಸಂಪರ್ಕಿಸಬಹುದು ಪ್ರಕಟಣೆ ತಿಳಿಸಿದೆ.

### ತೋಟಗಾರಿಕೆ ಇಲಾಖೆ: ಸಹಾಯಧನಕ್ಕಾಗಿ ಅರ್ಜಿ

» ಚಿತ್ರದುರ್ಗ

2025–26ನೇ ಸಾಲಿನ ಹಿರಿಯೂರು ತಾಲ್ಲೂಕಿನ ತೋಟಗಾರಿಕೆ ಇಲಾಖೆ ವತಿಯಿಂದ ಹನಿ ನೀರಾವರಿ ಯೋಜನೆ ರಾಷ್ಟ್ರೀಯ ಕೃಷಿ ವಿಕಾಸ ಯೋಜನೆಯಡಿ ಯಂತ್ರೋಪಕರಣಗಳಿಗೆ ಸಹಾಯಧನ, ರಾಷ್ಟ್ರೀಯ ತೋಟಗಾರಿಕೆ ಮಿಷನ್ ಯೋಜನೆಯಡಿ ವಿವಿಧ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುತ್ತಿದ್ದು,ಸಹಾಯಧನಪಡೆಯಲು ಅರ್ಹ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಜೂನ್ 15 ಅರ್ಜಿ ಸಲ್ಲಿಸಲು ಕೊನೆಯ ದಿನ. ಈ ಯೋಜನೆಯಡಿ ಬಾಳೆ, ದಾಳಿಂಬೆ, ಪಪ್ಪಾಯ, ಬಿಡಿ ಹೂವು ಬೆಳೆಗಳನ್ನು ಹೊಸದಾಗಿ ಬೆಳೆಯಲು ಸಹಾಯಧನ ನೀಡಲಾಗುವುದು. ಸಂರಕ್ಷಿತ ಬೇಸಾಯ ಕಾರ್ಯಕ್ರಮದಡಿ ತೋಟಗಾರಿಕೆ ಬೆಳೆಗಳಿಗೆ ಪ್ಲಾಸ್ಟಿಕ್ ನೆಲಹೊದಿಕೆ, ವೈಯಕ್ತಿಕ ಕೃಷಿ ಹೊಂಡ, ಕೊಯ್ಲೋತ್ತರ ನಿರ್ವಹಣೆಯಡಿ ಈರುಳ್ಳಿ ಸಂಗ್ರಹಣಾ ಘಟಕ, ಸಣ್ಣ ಪ್ರಮಾಣದ ಅಣಬೆ ಬೆಳೆಸುವ ಘಟಕ ಹಾಗೂ ತೋಟಗಾರಿಕ ಯಾಂತ್ರೀಕರಣದಡಿ 20 ಹೆಚ್.ಪಿ ಒಳಗೆ ಟ್ರ್ಯಾಕ್ಟರ್ ಸಹಾಯಧನ ನೀಡಲಾಗುವುದು. ಮಹಾತ್ಮಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ಹೊಸದಾಗಿ ನಾಟಿ ಮಾಡಲು ರೈತರಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತ ರೈತರು ಹಿರಿಯೂರು ತೋಟಗಾರಿಕೆ ಇಲಾಖೆ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ 9731285946, 9449116976, 9113237153 ಗೆ ಸಂಪರ್ಕಿಸಬಹುದು ಎಂದು ಹಿರಿಯೂರು ತೋಟಗಾರಿಕೆ ಇಲಾಖೆ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಕೆ.ಲೋಕೇಶ್ ತಿಳಿಸಿದ್ದಾರೆ.

### ಕಣ್ಣಿನ ತಪಾಸಣೆ ಶಿಬಿರದಲ್ಲಿ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ

# ಕಾಲಕಾಲಕ್ಕೆ ಕಣ್ಣಿನ ತಪಾಸಣೆ ಮಾಡಿಸಿಕೊಳ್ಳಿ

» ಚಿತ್ರದುರ್ಗ

ಬದುಕಿಗೆ ಕಣ್ಣುಗಳು ಬಹಳ ಅವಶ್ಯಕವಾಗಿದ್ದು, ಕಾಲಕಾಲಕ್ಕೆ ಕಣ್ಣುಗಳ ತಪಾಸಣೆ ಮಾಡಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ನಗರದ ಗಾಯತ್ರಿ ಕಲ್ಯಾಣ ಮಂಟಪದಲ್ಲಿ ಮಂಗಳವಾರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾಸ್ಪತ್ರೆ, ಜಿಲ್ಲಾ ಅಂಧತ್ವ ನಿವಾರಣಾ ವಿಭಾಗ, ನಗರಸಭೆ ಹಾಗೂ ಶಿವಮೊಗ್ಗ ಶಂಕರ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ಬೃಹತ್ ಉಚಿತ ಕಣ್ಣಿನ ತಪಾಸಣೆ, ಶಸ್ತ್ರ ಚಿಕಿತ್ಸೆ ಹಾಗೂ ಕನ್ನಡಕ ವಿತರಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ಜೀವನದ ಎಲ್ಲ ಚಟುವಟಿಕೆಗಳಿಗೆ ಮೂಲ ಕಣ್ಣು. ಕಣ್ಣುಗಳು ನಮ್ಮ ಆತ್ಮದ ಕಿಟಕಿಗಳಿದ್ದಂತೆ, ಕಣ್ಣಿನ ಬಗ್ಗೆ ಕಾಳಜಿ, ರಕ್ಷಣೆ ವಹಿಸುವುದು ಅತ್ಯಂತ ಅವಶ್ಯಕವಾಗಿದ್ದು, ಉಚಿತ ಕಣ್ಣಿನ ತಪಾಸಣಾ ಶಿಬಿರಗಳಲ್ಲಿ ಭಾಗವಹಿಸುವ ಮೂಲಕ ಕಣ್ಣಿನ ತಪಾಸಣೆ ಮಾಡಿಸಿಕೊಂಡು ಕಣ್ಣುಗಳ ಆರೋಗ್ಯ ಕಾಪಾಡಿಕೊಳ್ಳಿ ಎಂದರು.

ಹೊರ ಜಗತ್ತನ್ನು ನೋಡಿ ಆನಂದಿಸಬೇಕಾದರೆ ಕಣ್ಣನ್ನು ಜೋಪಾನವಾಗಿ ಕಾಪಾಡಿಕೊಳ್ಳಬೇಕು ಎಂದು ತಿಳಿಸಿದ ಅವರು, ವ್ಯಕ್ತಿಯ ಮರಣದ ನಂತರ ನೇತ್ರದಾನಕ್ಕೆ ಅವಕಾಶವಿದ್ದು, ಕಣ್ಣುಗಳನ್ನು ದಾನ ಮಾಡುವ ಮೂಲಕ



ಅಂಧರ ಬಾಳಿಗೆ ಬೆಳಕಾಗೋಣ ಎಂದು ಹೇಳಿದರು.ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್. ರಾಘವೇಂದ್ರ ಮಾತನಾಡಿ, ಚಿತ್ರದುರ್ಗ ನಗರಸಭೆ ವ್ಯಾಪ್ತಿಯಲ್ಲಿ ನಡೆಯುವ ಉಚಿತ ಕಣ್ಣಿನ ತಪಾಸಣೆ ಶಿಬಿರಗಳಿಗೆ ನಗರಸಭೆ ವತಿಯಿಂದ ಅಗತ್ಯ ಸಹಕಾರ ನೀಡಲಾಗುವುದು. ನೇತ್ರದಾನ ಮಹಾದಾನವಾಗಿದ್ದು, ಎಲ್ಲರೂ ಸಹ ಕೈಜೋಡಿಸಬೇಕಿದೆ ಎಂದರು.

ಚಲನಚಿತ್ರ ಕಲಾವಿದ ದೊಡ್ಡಣ್ಣ ಮಾತನಾಡಿ, ಕೆ.ಸಿ.ವೀರೇಂದ್ರ (ಪಪ್ಪಿ) ಶಾಸಕರಾಗಿ ಆಯ್ಕೆಯಾದ ಮರುದಿನದಿಂದಲೇ ಕ್ಷೇತ್ರದ ಜನರ ಸೇವೆಯಲ್ಲಿ ತಮ್ಮನ್ನು ಸಂಪೂರ್ಣವಾಗಿ ತೊಡಗಿಸಿಕೊಂಡಿದ್ದು, ಚಿತ್ರದುರ್ಗ ವಿಧಾನಸಭಾ ಕ್ಷೇತ್ರದ 22 ಗ್ರಾಮ ಪಂಚಾಯಿತಿಗಳವ್ಯಾಪ್ತಿಯಲ್ಲಿಉಚಿತಕಣ್ಣಿನ ತಪಾಸಣಾ ಶಿಬಿರವನ್ನು ನಡೆಸಿಕೊಂಡು ಬರಲಾಗಿದೆ. ಇದುವರೆಗೂ 20 ಗ್ರಾಮ ಪಂಚಾಯಿತಿಗಳಲ್ಲಿ ಕಣ್ಣು ತಪಾಸಣಾ ಶಿಬಿರವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿಕೊಂಡು ಬರಲಾಗಿದೆ. ಕ್ಷೇತ್ರದಲ್ಲಿ 6,451 ಜನರು ಪರೀಕ್ಷೆಗೆ ಒಳಗಾಗಿ, ಈ ಪೈಕಿ 667 ಜನರು ಕಣ್ಣಿನ ಶಸ್ತ್ರಚಿಕಿತ್ಸೆಗೆ ಒಳಪಟ್ಟಿದ್ದು, 2,460 ಜನರಿಗೆ ಕನ್ನಡಕಗಳನ್ನು ವಿತರಿಸಲಾಗಿದೆ ಎಂದು ಹೇಳಿದರು.

ಚಿತ್ರದುರ್ಗ ನಗರದ ಎಲ್ಲ ವಾರ್ಡ್‌ಗಳಲ್ಲಿ ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಉಚಿತ ಕಣ್ಣಿನ ನೇತ್ರ ತಪಾಸಣಾ ಶಿಬಿರವನ್ನು ಆಯೋಜಿಸಲಾಗುವುದು. ಈ ಶಿಬಿರದ ಪ್ರಯೋಜನವನ್ನು ಸಾರ್ವಜನಿಕರು ಪಡೆದುಕೊಳ್ಳಬೇಕು ಎಂದು ಮನವಿ ಮಾಡಿದರು.

ಜಿಲ್ಲಾ ಅಂಧತ್ವ ನಿವಾರಣಾಧಿಕಾರಿ ಡಾ. ಜಿ.ಓ.ನಾಗರಾಜ್ ಮಾತನಾಡಿ, ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಈಗಾಗಲೇ 20ಕ್ಕೂ ಹೆಚ್ಚು ಗ್ರಾಮ ಪಂಚಾಯಿತಿಗಳಲ್ಲಿ ಉಚಿತ ಕಣ್ಣಿ ಆರೋಗ್ಯ ತಪಾಸಣೆಗಳನ್ನು ಆಯೋಜಿಸಲಾಗಿದ್ದು, ಇಂದು ಚಿತ್ರದುರ್ಗ ನಗರದ 27ನೇ ವಾರ್ಡ್‌ನಲ್ಲಿ ಶಿಬಿರ ಆಯೋಜಿಸಲಾಗಿದೆ. ಪ್ರತಿ ತಿಂಗಳು ಒಂದೊಂದು ವಾರ್ಡಿನ ನಾಗರೀಕರಿಗೆ ಪ್ರತ್ಯೇಕವಾಗಿ ಶಿಬಿರ ನಡೆಯಲಿದೆ. ಉಚಿತ ಕಣ್ಣಿನ ತಪಾಸಣಾ ಶಿಬಿರಕ್ಕೆ ಜಿಲ್ಲಾ ಅಂಧತ್ವ ನಿವಾರಣಾ ವಿಭಾಗದಿಂದ ಅಗತ್ಯ ಸಹಕಾರ ನೀಡಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್. ಶಿವಣ್ಣ, ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ ಚಕ್ರವರ್ತಿ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎಸ್.ಪಿ.ರವೀಂದ್ರ, ಚಿತ್ರದುರ್ಗ ನಗರಸಭೆ ಪೌರಾಯುಕ್ತೆ ಎಂ.ರೇಣುಕಾ, ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ. ಗಿರೀಶ್, ಡಿವೈಎಸ್‌ಪಿ ಪಿ.ಕೆ.ದಿನಕರ್, ಶಂಕರ ಕಣ್ಣಿನ ಆಸ್ಪತ್ರೆಯ ಹಿರಿಯ ವೈದ್ಯಾಧಿಕಾರಿ ಡಾ.ರವಿಶಂಕರ್, ಮಾಜಿ ನಗರಸಭಾ ಅಧ್ಯಕ್ಷ ಹೆಚ್.ಸಿ. ನಿರಂಜನಮೂರ್ತಿ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್. ಮಂಜುನಾಥ್ ಸೇರಿದಂತೆ ಮುಖಂಡರಾದ ಮುಹಿಬುಲ್ಲಾ, ನರಸಿಂಹಮೂರ್ತಿ ಮತ್ತಿತರು ಇದ್ದರು.

# ಕೋಟೆ ನಿರ್ಮಾಣದಲ್ಲಿ ಕಾರ್ಮಿಕರ ಶ್ರಮ ಅಡಗಿದೆ

» ಚಿತ್ರದುರ್ಗ

ಕಾರ್ಮಿಕರಲ್ಲಿ ಅಸಾಧಾರಣವಾದ ಶಕ್ತಿಯಿದೆ. ಚಿತ್ರದುರ್ಗದ ಐತಿಹಾಸಿಕ ಕೋಟೆ ನಿರ್ಮಾಣದಲ್ಲಿ ಕಾರ್ಮಿಕರ ಶ್ರಮ ಅಡಗಿದೆ ಎಂದು ಇತಿಹಾಸ ಸಂಶೋಧಕರಾದ ಡಾ.ಬಿ.ರಾಜಶೇಖರಪ್ಪ ತಿಳಿಸಿದರು.

ನ್ಯಾಷನಲ್ ಸೆಂಟರ್ ಫಾರ್ ಲೇಬರ್(ಎನ್.ಸಿ.ಎಲ್.) ಸೇರ್ಪಡೆ, ಕರ್ನಾಟಕ ರಾಜ್ಯ ಕಟ್ಟಡ ಕಾರ್ಮಿಕರ ಕೇಂದ್ರ ಸಂಘ ಜಿಲ್ಲಾ ಶಾಖೆ ಇವುಗಳ ಸಹಯೋಗದೊಂದಿಗೆ

ರೋಟರಿ ಬಾಲಭವನದಲ್ಲಿ ಮಂಗಳವಾರ ನಡೆದ ಕಾರ್ಮಿಕರ ದಿನಾಚರಣೆ ಉದ್ಘಾಟಿಸಿ ಮಾತನಾಡಿದರು.

ಚಿತ್ರದುರ್ಗದ ಕೋಟೆ ಕಟ್ಟುವಾಗ ಬೃಹತ್ ಗಾತ್ರದ ಕಲ್ಲುಗಳನ್ನು ಕ್ರಮಬದ್ಧವಾಗಿ ಜೋಡಿಸಿ ಗೋಡೆ ನಿರ್ಮಾಣ ಮಾಡಿರುವುದರ ಹಿಂದೆ ಕಾರ್ಮಿಕರ ಪರಿಶ್ರಮವಿದೆ. ಭಾರತದಲ್ಲಿರುವ ಪ್ರಮುಖ ಕೋಟೆಗಳಲ್ಲಿ ಚಿತ್ರದುರ್ಗದ ಕೋಟೆಯೂ ಒಂದು. ಹೈದರಾಲಿ ಚಿತ್ರದುರ್ಗದ ಕೋಟೆಯನ್ನು ಮೆಚ್ಚಿಕೊಂಡಿದ್ದ. ಭರಮಣ್ಣನಾಯಕ 20 ಕೆರೆಗಳನ್ನು ನಿರ್ಮಾಣ ಮಾಡಿರುವುದರ ಹಿಂದೆ ಕಾರ್ಮಿಕರ ಶ್ರಮವಿದೆ. ಯಾವ ಚಕ್ರವರ್ತಿಯಿಂದಲೂ ಇಂತಹ ಕೆಲಸ ಆಗಿಲ್ಲ. ಬಾವಿ, ಸುರಂಗ ಮಾರ್ಗಗಳನ್ನು ನಿರ್ಮಿಸುವವರು ಕಟ್ಟಡ ಕಾರ್ಮಿಕರು. ಬಸ್, ರೈಲು




ಓಡಾಡುವ ಸುರಂಗ ಮಾರ್ಗ, ಸುಯೇಜ್ ಹಾಗೂ ಪನಾಮ ಕಾಲುವೆ ನಿರ್ಮಾಣದಲ್ಲಿಯೂ ಕಾರ್ಮಿಕರ ಶ್ರಮ ಅಡಗಿದೆ. ಹಾಗಾಗಿ ಕಾರ್ಮಿಕರ ಜೀವನ ಸುರಕ್ಷತೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಅನೇಕ ಕಾರ್ಯಕ್ರಮಗಳನ್ನು ಹಾಕಿಕೊಳ್ಳಬೇಕೆಂದು ಮನವಿ ಮಾಡಿದರು.

ದೇಶವನ್ನು ಪ್ರಗತಿಯತ್ತ ಕೊಂಡೊಯ್ಯುವಲ್ಲಿ ಸೈನಿಕರು, ರೈತರು, ಕಾರ್ಮಿಕರ ಶ್ರಮ ಬಹಳ ಮುಖ್ಯ. ರಾಷ್ಟ್ರವನ್ನು ಶಕ್ತಿಶಾಲಿಯನ್ನಾಗಿ ಮಾಡುವಷ್ಟು ಸಾಮರ್ಥ್ಯ ಕಾರ್ಮಿಕರಲ್ಲಿ ಅಡಗಿದೆ. ಕಾರ್ಮಿಕರ ಕಲ್ಯಾಣಕ್ಕೆ ಸರ್ಕಾರಗಳು ಯೋಚಿಸುತ್ತಿವೆ ಎಂದು ಹೇಳಿದರು.

ಕೆ.ಎಸ್.ಸಿ.ಡಬ್ಲ್ಯು.ಸಿ.ಯು. ರಾಜ್ಯ ಪ್ರಧಾನ ಕಾರ್ಯದರ್ಶಿ ಲೀಲಾವತಿ ಮಾತನಾಡಿ ಸಮಾಜ ಕಟ್ಟುವ ಕೆಲಸ ಮಾಡುತ್ತಿರುವವರು ಕಾರ್ಮಿಕರು. ದೇಶ ಕಟ್ಟಿದ ಕಾರ್ಮಿಕರ ಪರಿಸ್ಥಿತಿ ಕಷ್ಟದಲ್ಲಿದೆ. ಮೂಲಭೂತ ಸೌಲಭ್ಯಗಳಿಗಾಗಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿರುದ್ದ ಹೋರಾಟ ಮಾಡಬೇಕಿದೆ. ನಲವತ್ತು ವರ್ಷಗಳಿಂದಲೂ ಎನ್.ಸಿ.ಎಲ್.ಕೆಲಸ ಮಾಡುತ್ತಿದೆ. ಕೇಂದ್ರ ಸರ್ಕಾರ 1196 ರಲ್ಲಿ ಕಾರ್ಮಿಕರಿಗೆಅನೇಕಸೌಲಭ್ಯಗಳನ್ನು ನೀಡುವುದಕ್ಕಾಗಿಕಾರ್ಮಿಕರಕಲ್ಯಾಣ ಮಂಡಳಿಯನ್ನು ರಚಿಸಿತು. ಅನೇಕ ಹೋರಾಟಗಳ ಫಲವಾಗಿ ರಾಜ್ಯ ಸರ್ಕಾರ 2007 ರಲ್ಲಿ ಕಾರ್ಮಿಕರ ಕಲ್ಯಾಣ ಮಂಡಳಿಯನ್ನು ರಚಿಸಿತು. ಆದರೂ ಕಾರ್ಮಿಕರು ತಮ್ಮ ಹಕ್ಕುಗಳಿಗಾಗಿ ಇನ್ನು ಹೋರಾಟ ನಡೆಸುತ್ತಿರುವುದು ನೋವಿನ ಸಂಗತಿ ಎಂದು ವಿಷಾಧಿಸಿದರು.

ಕೆ.ಎಸ್.ಸಿ.ಡಬ್ಲ್ಯು.ಸಿ.ಯು. ಜಿಲ್ಲಾಧ್ಯಕ್ಷ ವೈ.ಸತ್ಯಪ್ಪ ಅಧ್ಯಕ್ಷತೆ ವಹಿಸಿದ್ದರು.

ಜಿಲ್ಲಾಸಂಚಾಲಕಗಣೇಶ್,ಪ್ರಧಾನ ಕಾರ್ಯದರ್ಶಿ ಪ್ರಸನ್ನಕುಮಾರ್, ಜಿಲ್ಲಾ ಕಾರ್ಯದರ್ಶಿ ಮಲ್ಲೇಶ್, ಕಾರ್ಯದರ್ಶಿ ಶಿವಕುಮಾರ್, ತಾಲ್ಲೂಕು ಅಧ್ಯಕ್ಷ ಸಿದ್ದಲಿಂಗಪ್ಪ

ನಿರ್ದೇಶಕ ಪಿ.ಎಂ.ನಾಗರಾಜ್, ಉಪಾಧ್ಯಕ್ಷ ಎಂ.ಸಿ.ಮಚ್ಚೇಂದ್ರಪ್ಪ, ಸಂಘಟನಾ ಕಾರ್ಯದರ್ಶಿ ಎಂ.ಡಿ.ಶಫಿ ಹಾಗೂ ಪದಾಧಿಕಾರಿಗಳು ವೇದಿಕೆಯಲ್ಲಿ ಇದ್ದರು.

## ಶ್ರೀರಾಘವೇಂದ್ರಸ್ವಾಮಿ ಮಠದಲ್ಲಿ ದುರ್ಗಾದೀಪ ನಮಸ್ಕಾರ ಜೂ.1ರಂದು

» ಚಿತ್ರದುರ್ಗ

ನಗರದ ಚಿಕ್ಕಪೇಟೆಯ ಆನೆಬಾಗಿಲು ಹತ್ತಿರದ ಶ್ರೀ ಗುರುರಾಜೋ ವಿಜಯತೇ ಜಗದ್ಗುರು ಶ್ರೀ ಮನ್ಮಧ್ವಾಚಾರ್ಯ ಮೂಲ ಮಹಾಸಂಸ್ಥಾನ ನಂಜನಗೂಡು ಶ್ರೀರಾಘವೇಂದ್ರಸ್ವಾಮಿಗಳವರ ಮಠದವತಿಯಿಂದ ಆಶ್ಲೇಷ ಬಲಿ ಹೋಮ ಹಾಗೂ 'ದುರ್ಗಾದೀಪ ನಮಸ್ಕಾರ ಜೂ. 1 ರಂದು ಹಮ್ಮಿಕೊಳ್ಳಲಾಗಿದೆ ಎಂದು ಮಠದ ಪ್ರಕಟಣೆ ತಿಳಿಸಿದೆ.

ಜೂ. 01ನೇ ಭಾನುವಾರ ಬೆಳಿಗ್ಗೆ 9–30ಕ್ಕೆ ಅಶ್ಲೇಷ ಬಲಿಯ ಹೋಮ ನಡೆಯಲಿದ್ದು, ಇದರಿಂದ ಶ್ರೀ ಮಾತಾಪಿತೃಗಳ ನಿಂದನೆ, ಮಾನಸಿಕ ತೊಳಲಾಟ, ಕ್ಷಯರೋಗ, ಕುಷ್ಠರೋಗ, ತುರಿಕೆರೋಗ, ಚರ್ಮರೋಗ, ಸಮಸ್ತ ಅಂಗವಿಕಲತೆ, ಕಿವಿ ಸೋರುವುದು, ಸರ್ಪ ಹಿಂಸೆ, ಸರ್ಪವಧ, ಅಪಘಾತದಿಂದ ಆಗಿರುವ ಮತ್ತು ತಿಳಿದು ತಿಳಿಯದೇ ಮಾಡಿದ ಸರ್ಪಹತ್ಯೆ, ಗುರುಶಾಪ, ಗುರುವಿನಿಂದ ಪೂರ್ವಜನ್ಮದ ಹಾಗೂ ಈ ಜನ್ಮದಲ್ಲಿ ಆಗಿರುವ ಇನ್ನೂ ಹಲವಾರು ದೋಷಗಳು ಕಳೆದು ಮತ್ತು ನಾರಾಯಣ ಬಲಿಯ ದೋಷ ನಿವಾರಣೆಯಾಗುವುದು ಭಕ್ತಾಧಿಗಳು ಸೇವೆಯಲ್ಲಿ ಪಾಲ್ಗೊಂಡು ಶ್ರೀ ಗುರುರಾಜ ಅಂತರ್ಗತ ಶ್ರೀ ಆಶ್ಲೇಷ ಬಲಿರಾಜ ಅಭಿಮಾನಿಯಾದ ಶೇಷದೇವರ ಅಂತರ್ಗತನಾದ ಶ್ರೀಜಯಾಪತಿ ಸಂಕರ್ಷಣಾಭಿನ್ನ ಶ್ರೀ ಲಕ್ಷ್ಮೀನರಸಿಂಹ ದೇವರ ಸಂಪೂರ್ಣ ಅನುಗ್ರಹ ಫಲ ಪ್ರಾಪ್ತಿಯಾಗುವುದು.

ಜೂ. 01 ನೇ ಭಾನುವಾರ ಸಂಜೆ 6–00ಕ್ಕೆ 'ದುರ್ಗಾದೀಪ ನಮಸ್ಕಾರ ಕಾರ್ಯಕ್ರಮ ನಡೆಯಲಿದ್ದು, ಇದನ್ನು ಮಾಡುವುದರಿಂದ ವಿವಾಹ ವಿಳಂಬದೋಷ, ವಿದ್ಯಾ, ಆತ್ಮಸ್ಥೈರ್ಯ, ರಾಜವಶ, ಯಶ, ಶತೃಭಾಧೆ ನಿವೃತ್ತಿ, ಸಕಲದೋಷ ಪರಿಹಾರ, ದೃಷ್ಟಿದೋಷ ಪರಿಹಾರ, ಲಕ್ಷ್ಮೀಪ್ರಾಪ್ತಿ, ನವಗ್ರಹ ದೋಷ ಪರಿಹಾರ, ಪ್ರಯೋಗ ಅಭಿಚಾರ ದೋಷ ನಿವಾರಣೆಯಾಗುವುದು. ಕಾರಣ ಭಕ್ತಾದಿಗಳು ಸೇವೆಯಲ್ಲಿ ಪಾಲ್ಗೊಂಡು ಶ್ರೀ ಗುರುರಾಜರ ಅಂತರ್ಗತ ಮಹಾಲಕ್ಷ್ಮೀ, ಮಹಾಕಾಳಿ, ಮಹಾಸರಸ್ವತಿ ದೇವಿಯರ ಹಾಗೂ ಲಕ್ಷ್ಮೀನರಸಿಂಹದೇವರ ಸಂಪೂರ್ಣ ಅನುಗ್ರಹ ಫಲ ಪ್ರಾಪ್ತಿಯಾಗುವುದು ಎಂದು ತಿಳಿಸಿದೆ.

ಆಶ್ಲೇಷ ಬಲಿ ಸಾಮೂಹಿಕ ಹೋಮ ಹಾಗೂ ದುರ್ಗಾದೀಪ ನಮಸ್ಕಾರ ಸಾಮೂಹಿಕ ಸೇವಾ ದರ ತಲಾ –200 ರೂ.ಗಳನ್ನು ನಿಗಧಿ ಮಾಡಿದೆ. ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರ ದೂರವಾಣಿ ಸಂಖ್ಯೆ 08194–224141 : 9483833601 ಸಂಪರ್ಕ ಮಾಡಬಹುದಾಗಿದೆ

## ಪ್ರಮುಖ ಸುದ್ದಿ

# ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನೆಹರುರವರ ಪುಣ್ಯಸ್ಮರಣೆ

» ಚಿತ್ರದುರ್ಗ

ಕಷ್ಟ ಕಾಲದಲ್ಲಿ ಭಾರತವನ್ನು ಮುನ್ನಡೆಸಿದ ಪ್ರಥಮ ಪ್ರಧಾನ ಮಂತ್ರಿ ಜವಾಹರಲಾಲ್ ನೆಹರುರವರಲ್ಲಿ ದೂರದೃಷ್ಟಿಯಿತ್ತೆಂದು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್ ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಜವಾಹರಲಾಲ್‌ನೆಹರುರವರ ಪುಣ್ಯಸ್ಮರಣೆ ಪ್ರಯುಕ್ತ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಮಾತನಾಡಿದರು.

ಕೃಷಿ, ಕೈಗಾರಿಕೆ, ಶಿಕ್ಷಣಕ್ಕೆ ನೆಹರುರವರು ಹೆಚ್ಚಿನ ಒತ್ತು ಕೊಟ್ಟ ಪರಿಣಾಮ ಭಾರತ ಆಹಾರ ಉತ್ಪಾದನೆಯಲ್ಲಿ ಸ್ವಾವಲಂಭಿಯಾಗಿದೆ. ದೇಶದಲ್ಲಿರುವ ಪ್ರತಿಯೊಬ್ಬರು ಒಂದಲ್ಲ ಒಂದು ರೀತಿ ಫಲಾನುಭವಿಗಳೆ.ಹಾಗಾಗಿಜವಾಹರಲಾಲ್ ನೆಹರುರವರಿಗೆ ಯಾರು ಸಾಟಿಯಿಲ್ಲ. ಅತ್ಯಂತ ಶ್ರೀಮಂತ ಕುಟುಂಬದಲ್ಲಿ ಜನಿಸಿದ ನೆಹರುರವರು ಇಂಗ್ಲೆಂಡ್‌ನಲ್ಲಿ ಶಿಕ್ಷಣ ಪಡೆದು ಭಾರತಕ್ಕೆ ಬಂದ ಮೇಲೆ ಮಹಾತ್ಮಗಾಂಧಿ ಜೊತೆ ಸೇರಿಕೊಂಡು ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದರು. ಅಣೆಕಟ್ಟೆ, ವಿಶ್ವವಿದ್ಯಾನಿಲಯಗಳು, ಪಂಚವಾರ್ಷಿಕ ಯೋಜನೆಗೆ ಆದ್ಯತೆ ಕೊಟ್ಟ ಪರಿಣಾಮವಾಗಿ ಭಾರತ ಸುಭಿಕ್ಷವಾಗಿದೆ ಎಂದರು.

ದೇಶ ವಿಭಜನೆಯಾದ ಸಂದರ್ಭದಲ್ಲಿ



ಬ್ರಿಟೀಷರು ಕೋಮುವಾದವನ್ನು ಬಿತ್ತಿ ಹೋಗಿದ್ದರು. ಅಂತಹ ಕಷ್ಟಗಳನ್ನೆಲ್ಲಾ ನಿಭಾಯಿಸಿಕೊಂಡು ದೇಶವನ್ನು ಮುನ್ನಡೆಸಿಕೊಂಡು ಹೋದ ಜವಾಹರಲಾಲ್ ನೆಹರುರವರಿಗೆ ಮಕ್ಕಳನ್ನು ಕಂಡರೆ ಎಲ್ಲಿಲ್ಲದ ಪ್ರೀತಿ. ಹಾಗಾಗಿ ಅವರನ್ನು ಚಾಚಾ ನೆಹರು ಅಂತ ಕರೆಯುತ್ತಿದ್ದರೆಂದು ಸ್ಮರಿಸಿಕೊಂಡರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಎನ್.ಬಿ.ಟಿ.ಜಮೀರ್ ಮಾತನಾಡಿ ಎಲ್ಲಾ ಚಳುವಳಿಗಳಲ್ಲಿಯೂ ಭಾಗವಹಿಸುತ್ತಿದ್ದ ಜವಾಹರಲಾಲ್ ನೆಹರುರವರು ಹತ್ತು ವರ್ಷಗಳ ಕಾಲ ಸೆರೆಮನೆಯಲ್ಲಿದ್ದರು. ಪಂಚವಾರ್ಷಿಕ ಯೋಜನೆಯನ್ನು ಜಾರಿಗೆ ತಂದವರು ನೆಹರು. ಅರವತ್ತು ವರ್ಷಗಳ ಕಾಲ ದೇಶವನ್ನಾಳಿದ ಕಾಂಗ್ರೆಸ್‌ನವರು ಏನು ಮಾಡಿದ್ದಾರೆಂದು ಪ್ರಶ್ನಿಸುತ್ತಿರುವ ಕೋಮುವಾದಿ ಬಿಜೆಪಿ.ಯವರು ಮೊದಲು ಜವಾಹರಲಾಲ್‌ರವರು ದೇಶಕ್ಕೆ ಕೊಟ್ಟಿರುವ ಕೊಡುಗೆ ಬಗ್ಗೆ ತಿಳಿದುಕೊಳ್ಳಲಿ ಎಂದು ಎಚ್ಚರಿಸಿದರು.

ದೇಶದಲ್ಲಿ 4800 ಡ್ಯಾಂಗಳಿಗೆ ನೆಹರುರವರು ಫೌಂಡೇಶನ್ ಹಾಕಿದ್ದಾರೆ. ಇಂದಿರಾಗಾಂಧಿ ಕಾಲದಲ್ಲಿ ಎಲ್ಲವೂ ಪೂರ್ಣಗೊಂಡಿತು. ಈಗಿನ ನರೇಂದ್ರಮೋದಿ ಬಿಜೆಪಿ.ಪ್ರಧಾನಿಯಗುವ ಬದಲು ದೇಶದ ಪ್ರಧಾನಿಯಾಗಲಿ ಎಂದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ ಮಾತನಾಡುತ್ತ ಜವಾಹರಲಾಲ್‌ನೆಹರು ದೇಶದ ಪ್ರಥಮ ಪ್ರಧಾನಿಯಾಗಿ ಅನೇಕ ಯೋಜನೆಗಳನ್ನು ಕೊಡುಗೆಯಾಗಿ ಕೊಟ್ಟಿದ್ದಾರೆ. ಭಾರತದಲ್ಲಿ ಕೈಗಾರಿಕೆ, ವಿಶ್ವವಿದ್ಯಾನಿಲಯಗಳಿರಲಿಲ್ಲ. ನೆಹರು ಪ್ರಧಾನಿಯಾದ ಮೇಲೆ ಶಿಕ್ಷಣ, ಕೈಗಾರಿಕೆ, ಕೃಷಿಗೆ ಒತ್ತು ಕೊಟ್ಟರು ಎಂದು ಹೇಳಿದರು.

ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಕೆ.ಎಂ.ಹಾಲಸ್ವಾಮಿ ಮಾತನಾಡಿ ಕಷ್ಟದ ಪರಿಸ್ಥಿತಿಯಲ್ಲಿ ದೇಶವನ್ನು ಮುನ್ನಡೆಸಿದ ಕೀರ್ತಿ ಪ್ರಥಮ ಪ್ರಧಾನಿ ಜವಾಹರಲಾಲ್ ನೆಹರುರವರಿಗೆ ಸಲ್ಲಬೇಕು. 20 ಅಂಶಗಳ ಕಾರ್ಯಕ್ರಮಗಳನ್ನು ಜಾರಿಗೆ ತಂದು ಭಾರತವನ್ನು ಶಕ್ತಿಶಾಲಿಯನ್ನಾಗಿಸಿದರು. ಅಲಿಪ್ತ ರಾಷ್ಟ್ರಗಳ ಒಕ್ಕೂಟ ರಚಿಸಿಕೊಂಡು ಅದರ ನೇತೃತ್ವವನ್ನು ನೆಹರು ವಹಿಸಿಕೊಂಡಿದ್ದರು. ಬೇರೆಯವರಿಂದ ಅದು ಸಾಧ್ಯವಾಗುತ್ತಿರಲಿಲ್ಲ ಎಂದರು.

ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಜಿಲ್ಲಾಧ್ಯಕ್ಷ ಎನ್.ಡಿ.ಕುಮಾರ್ ಮಾತನಾಡುತ್ತ ದೇಶದ ಮೊದಲ ಪ್ರಧಾನಿಯಾಗಿದ್ದ ಜವಾಹರಲಾಲ್‌ನೆಹರುರವರ ಕೊಡುಗೆ ಅಪಾರ. ದೇಶಕ್ಕೆ ನೆಹರು ಕುಟುಂಬದ ಸೇವೆ ಬಹಳಷ್ಟಿದೆ. ಭಾರತವನ್ನು ಬಡತನದಿಂದ ಮೇಲಕ್ಕೆತ್ತಬೇಕೆನ್ನುವ ಆಲೋಚನೆ ಅವರಲ್ಲಿತ್ತು. ಅದಕ್ಕಾಗಿ ಪಂಚ ವಾರ್ಷಿಕ ಯೋಜನೆಗಳನ್ನು ಜಾರಿಗೆ ತಂದು ಕೃಷಿಗೆ ಒತ್ತು ಕೊಟ್ಟಿದ್ದರೆಂದು ಗುಣಗಾನ ಮಾಡಿದರು.

ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್, ಉಪಾಧ್ಯಕ್ಷರುಗಳಾದ ಜಿ.ಎಸ್.ಕುಮಾರ್‌ಗೌಡ, ಎಸ್.ಎನ್. ರವಿಕುಮಾರ್. ಪದವೀಧರ ವಿಭಾಗದ ಅಧ್ಯಕ್ಷ ಮುದಸಿರ್‌ನವಾಜ್, ಜಿಲ್ಲಾ ಕಾಂಗ್ರೆಸ್ ಕಾನೂನು, ಮಾಹಿತಿ ಹಕ್ಕು ಹಾಗೂ ಮಾನವ ಹಕ್ಕುಗಳ ವಿಭಾಗದ ಅಧ್ಯಕ್ಷ ಸುದರ್ಶನ್, ಪರಿಶಿಷ್ಟ ವರ್ಗ ವಿಭಾಗದ ಅಧ್ಯಕ್ಷ ಮಂಜುನಾಥ್, ವಸೀಂ, ರಮೇಶ್ ಮದಕರಿಪುರ, ಅಲ್ಪಸಂಖ್ಯಾತರ ವಿಭಾಗದ ಅಧ್ಯಕ್ಷ ಸೈಯದ್ ಖುದ್ದೂಸ್, ನ್ಯಾಯವಾದಿಮಹಮದ್‌ರಫಿ,ತಿಪ್ಪೇಸ್ವಾಮಿ, ಪವಿತ್ರ, ರೇಣುಕ, ಕೆ.ಪಿ.ಸಿ.ಸಿ.ಮಹಿಳಾ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಜ್ಯೋತಿಲಕ್ಷ್ಮಿಗೋಪಿಂಯಾದವ್, ಸೇವಾದಳದ ಜಿಲ್ಲಾಧ್ಯಕ್ಷ ಭೂತೇಶ್, ಮಹಿಳಾಧ್ಯಕ್ಷೆ ನೇತ್ರಾವತಿ ತಾಲ್ಲೂಕು ಅಧ್ಯಕ್ಷೆ ಲತಾಮಣಿ ಇನ್ನು ಅನೇಕರು ಪುಣ್ಯಸ್ಮರಣೆಯಲ್ಲಿ ಪಾಲ್ಗೊಂಡಿದ್ದರು.

# ಕಟ್ಟಡ ನಿರ್ಮಾಣದ ಕೆಲಸ ಮಾಡುವಾಗ ಸುರಕ್ಷಾ ಕಿಟ್‌ಗಳನ್ನು ಧರಿಸಿ: ಅನಿಲ್ ಬಾಲಚಂದ್ರ ಬಗಟಿ

» **ಚಿತ್ರದುರ್ಗ**

ಕಟ್ಟಡ ನಿರ್ಮಾಣದ ಕೆಲಸ ಮಾಡುವಾಗ ಸುರಕ್ಷಾ ಕಿಟ್‌ಗಳನ್ನು ಧರಿಸಿಕೊಳ್ಳುವಂತೆ ಜಿಲ್ಲಾ ಕಾರ್ಮಿಕ ಅಧಿಕಾರಿ ಅನಿಲ್ ಬಾಲಚಂದ್ರ ಬಗಟಿ ಕಾರ್ಮಿಕರಿಗೆ ಸೂಚಿಸಿದರು.

ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದಿಂದ ಪತ್ರಕರ್ತರ ಭವನದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಹದಿನಾರನೆ ವರ್ಷದ ಕಾರ್ಮಿಕರ ದಿನಾಚರಣೆ ಹಾಗೂ ನೊಂದಾಯಿತ ಕಟ್ಟಡ ಕಾರ್ಮಿಕರ ಪ್ರತಿಭಾವಂತ ಮಕ್ಕಳ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಕಟ್ಟಡಕಾರ್ಮಿಕರುಸರ್ಕಾರದಿಂದಸಿಗುವ ಸೌಲತ್ತುಗಳನ್ನು ಪಡೆದುಕೊಳ್ಳಬೇಕಾದರೆ ಆಧಾರ್ ಕಾರ್ಡ್‌ನಲ್ಲಿರುವಂತೆ ಹೆಸರುಗಳನ್ನು ನಮೂದಿಸಬೇಕು. ಮಕ್ಕಳ ವಿದ್ಯಾರ್ಥಿವೇತನ, ವಿವಾಹಕ್ಕೆ ಧನ ಸಹಾಯಕ್ಕಾಗಿ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು. ಕಾಲ ಕಾಲಕ್ಕೆ ತಕ್ಕಂತೆ ಗುರುತಿನ ಚೀಟಿ ನವೀಕರಣವಾಗಬೇಕು. ನಿಜವಾದ ಕಾರ್ಮಿಕರು ಗುರುತಿನ ಚೀಟಿಗಳನ್ನು ಪಡೆದುಕೊಳ್ಳಬೇಕು. ವಿವಾಹವಾಗಿ ಒಂದು ತಿಂಗಳ ನಂತರ ಸಹಾಯ ಧನಕ್ಕೆ ಅರ್ಜಿಗಳನ್ನು ಸಲ್ಲಿಸಿದರೆ ಒಳ್ಳೆಯದು ಎಂದು ಕಾರ್ಮಿಕರಿಗೆ ತಿಳಿಸಿದರು.



ಮಾನ್ಯತೆಪಡೆದಆಸ್ಪತ್ರೆಗಳಲ್ಲಿಕಾರ್ಮಿಕರು ಚಿಕಿತ್ಸೆ ಪಡೆದುಕೊಂಡಾಗ ಮಾತ್ರ ವೈದ್ಯಕೀಯ ವೆಚ್ಚ ಭರಿಸಲು ಸಾಧ್ಯ. ಅರವತ್ತು ವರ್ಷಗಳ ನಂತರ ಕಟ್ಟಡ ಕಾರ್ಮಿಕರು ಪಿಂಚಣಿ ಪಡೆದುಕೊಳ್ಳಲು ಅರ್ಹರು. 55 ವರ್ಷಗಳಾದ ನಂತರ ಗುರುತಿನ ಚೀಟಿ ನವೀಕರಣಗೊಳಿಸಿಕೊಳ್ಳಬೇಕು. ಇಲ್ಲವಾದಲ್ಲಿಸೌಲಭ್ಯಗಳನ್ನುಪಡೆಯುವುದು ಕಷ್ಟವಾಗುತ್ತದೆ. ಕಟ್ಟಡ ಕಟ್ಟುವಾಗ ಆದಷ್ಟು ಮೊಬೈಲ್‌ನಲ್ಲಿ ಮಾತನಾಡುವುದನ್ನು ಕಮ್ಮಿ ಮಾಡಿ. ಸೇಫ್ಟಿ ಬೆಲ್ಟ್‌ಗಳನ್ನು ಹಾಕಿಕೊಳ್ಳಿ. ವಿಜ್ಞಾನ-ತಂತ್ರಜ್ಞಾನ ಮುಂದುವರೆದಂತೆ ಕೆಲಸದಲ್ಲಿ ನೈಪುಣ್ಯತೆಯನ್ನು ಕಂಡುಕೊಳ್ಳಿ. ದುಶ್ಚಟಗಳಿಂದ ದೂರವಿದ್ದು, ಉತ್ತಮ ಆರೋಗ್ಯ ಕಾಪಾಡಿಕೊಂಡು ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಕೊಡಿಸಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ತೇರ್ಗಡೆಯಾಗಿರುವಮಕ್ಕಳಿಗೆಸಂಪನ್ಮೂಲ ವ್ಯಕ್ತಿಗಳಿಂದ ಕಾರ್ಯಾಗಾರ ನಡೆಸುವ ಚಿಂತನೆಯಿದೆ. ಇದರಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ ನೆರವಾಗಲಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ ಮಾತನಾಡಿ ದಿನವಿಡಿ ಕಷ್ಟಪಟ್ಟು ದುಡಿಯುವ ಹಣವನ್ನು ದುಶ್ಚಟಕ್ಕೆ ಬಳಸುವ ಬದಲು ಮಕ್ಕಳಿಗೆ ಒಳ್ಳೆ ಶಿಕ್ಷಣ ಕೊಡಿಸಿ ಉನ್ನತ ಅಧಿಕಾರಿಗಳನ್ನಾಗಿ ಮಾಡಿ. ಆಗ ನೀವುಗಳು ಪಡುವ ಶ್ರಮಕ್ಕೆ ತಕ್ಕ ಫಲ ಸಿಕ್ಕಂತಾಗುತ್ತದೆ. ಧೂಮಪಾನ, ಮದ್ಯಪಾನ, ಗುಟ್ಕದಿಂದ ದೂರವಿದ್ದು ಆರೋಗ್ಯಂತರಾಗಿರಿ ಎಂದು ಕಾರ್ಮಿಕರಿಗೆ ಕಿವಿಮಾತು ಹೇಳಿದರು.

ಶ್ರಮ ಪಟ್ಟು ದುಡಿಯುವ ನೀವುಗಳು ಯಾವುದೇ ಕಾರಣಕ್ಕೂ ಸೋಮಾರಿಗಳಾಗಬೇಡಿ. ಶ್ರಮಜೀವಿಗಳಾಗಿರುವ ನಿಮ್ಮಲ್ಲಿ ಶಕ್ತಿಯಿಲ್ಲದಂತಾದರೆ ಕಟ್ಟಡವನ್ನು ಹೇಗೆ ಕಟ್ಟುತ್ತೀರಾ ಎಂದು ಕಾರ್ಮಿಕರನ್ನು ಪ್ರಶ್ನಿಸಿದ ವೈ.ತಿಪ್ಪೇಸ್ವಾಮಿ ವಾಹನ ಚಾಲನೆ ಹಾಗೂ ಕಟ್ಟಡ ನಿರ್ಮಾಣ ಸಮಯದಲ್ಲಿ ಮೊಬೈಲ್‌ನಲ್ಲಿ ಮಾತನಾಡಿದರೆ ಅಪಘಾತವಾಗುವ ಸಾಧ್ಯತೆಗಳಿರುತ್ತವೆ. ಆಕಸ್ಮಿಕವಾಗಿ ಪ್ರಾಣ ಕಳೆದುಕೊಂಡರೆ ನಿಮ್ಮನ್ನೆ ನಂಬಿರುವ ಕುಟುಂಬ ಬೀದಿಗೆ ಬೀಳುತ್ತದೆ. ಅದಕ್ಕಾಗಿ ಎಚ್ಚರದಿಂದಿರಿ ಕಾನೂನು ಉಲ್ಲಂಘನೆ ಮಾಡಬೇಡಿ ಎಂದು ತಿಳಿಸಿದರು.

ಕಟ್ಟಡ ಕಾರ್ಮಿಕರ ಸಂಘದ ಜಿಲ್ಲಾಧ್ಯಕ್ಷ ವೈ.ತಿಪ್ಪೇಸ್ವಾಮಿ ಅಧ್ಯಕ್ಷತೆ ವಹಿಸಿದ್ದರು.

ಹೆಚ್.ಹಾಲೇಶಪ್ಪ, ಜಿಲ್ಲಾ ಕಟ್ಟಡ ಕಾರ್ಮಿಕರ ಸಂಘದ ಉಪಾಧ್ಯಕ್ಷ ಎಂ.ಮಲ್ಲಿಕಾರ್ಜುನ್, ಮಹಿಳಾ ಪ್ರಧಾನ ಕಾರ್ಯದರ್ಶಿ ಪಿ.ಲಕ್ಷ್ಮಿದೇವಿ, ಖಜಾಂಚಿ ಟಿ.ಅಶೋಕ

ಕಾನೂನು ಸಲಹೆಗಾರ ಶಿವಮೂರ್ತಿ ಸೇರಿದಂತೆ ಸಂಘದ ಪದಾಧಿಕಾರಿಗಳು ವೇದಿಕೆಯಲ್ಲಿದ್ದರು.

ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಕಾರ್ಮಿಕರ ಮಕ್ಕಳನ್ನು ಸನ್ಮಾನಿಸಲಾಯಿತು.

### ತಿಪ್ಪೇಸ್ವಾಮಿಯವರು ಜನಪರ ವಿಚಾರಗಳಲ್ಲಿ ಮುಲಾಜು ನೋಡದೆ ಮಾತನಾಡುತ್ತಿದ್ದರು: ಸಿ.ಎಂ

## ಪ್ರತಿಭೆಯನ್ನು ಜಾತಿಯಿಂದ ಅಳೆಯುವುದು ತಪ್ಪು

» **ಬೆಂಗಳೂರು**

ತಿಪ್ಪೇಸ್ವಾಮಿಯವರು ಜನಪರ ವಿಚಾರಗಳಲ್ಲಿ ಮುಲಾಜು ನೋಡದೆ ಮಾತನಾಡುತ್ತಿದ್ದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸ್ಮರಿಸಿದರು.

ಬೀ ಕಲ್ಚರ್ ಸಂಸ್ಥೆ ಕೊಂಡಜ್ಜಿ ಸಭಾ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ. ಬಿ.ಎಂ. ತಿಪ್ಪೇಸ್ವಾಮಿ ಅವರ "ಮುಟ್ಟಿಸಿಕೊಂಡವರು" ಕೃತಿಯನ್ನು ಲೋಕಾರ್ಪಣೆಗೊಳಿಸಿ ಮಾತನಾಡಿದರು.




ಸತ್ಯವನ್ನು ಅತ್ಯಂತ ನಿಷ್ಠುರವಾಗಿ ಹೇಳುತ್ತಿದ್ದರು. ಈ ಕಾರಣಕ್ಕಾಗಿ ಅವರು ಹಲವು ಬಾರಿ ಸತ್ಯ ಹೇಳಿ ಸಮಸ್ಯೆಗೆ ಸಿಕ್ಕಿಕೊಂಡರು ಎಂದು ಹಳೆಯ ಘಟನೆಗಳನ್ನು ನೆನಪಿಸಿಕೊಂಡರು.

ಡಾ.ತಿಪ್ಪೇಸ್ವಾಮಿಯವರ ಜೊತೆ ನಾನೂ 1985 ರಿಂದ ಶಾಸಕನಾಗಿದ್ದೆ. ಸಚಿವರಾಗುವ ಎಲ್ಲಾ ಅರ್ಹತೆಗಳಿದ್ದರೂ ಶಾಸಕಾಂಗ ಪಕ್ಷದ ಉಪನಾಯಕರಾದರೇ ಹೊರತು ಸಚಿವರಾಗಲಿಲ್ಲ ಎನ್ನುವ ಬೇಸರ ನನಗೂ ಇದೆ.

ಅಸ್ಪೃಶ್ಯತೆ ಸಮಾಜಕ್ಕೆ ಅಂಟಿದ ಶಾಪ. ಅಸ್ಪೃಶ್ಯ ಸಮಾಜದಿಂದ ಬಂದ ಅತ್ಯಂತ ಪ್ರತಿಭಾವಂತ ವೈದ್ಯರಾಗಿದ್ದರು. ಶಿಕ್ಷಣ ಅಸ್ಪೃಶ್ಯತೆ ಮತ್ತು ದಾಸ್ಯದಿಂದ ಮುಕ್ತಿ ದೊರಕಿಸಿಕೊಡುತ್ತದೆ ಎಂದರು.

ತಿಪ್ಪೇಸ್ವಾಮಿಯವರು ತಮ್ಮ ಸಮಾಜ, ಸಮುದಾಯದ ಪ್ರಗತಿ ಮತ್ತು ಅಭಿವೃದ್ಧಿಗೆ ಸದಾ ತುಡಿಯುತ್ತಿದ್ದರು. ಅಂಬೇಡ್ಕರ್ ಅವರೂ ಕೂಡ ಇಡೀ ಸಮಾಜ ಮತ್ತು ಸಮುದಾಯಕ್ಕಾಗಿ ತಮ್ಮ ಶಿಕ್ಷಣ ಮತ್ತು ಜ್ಞಾನವನ್ನು ಮುಡಿಪಾಗಿಟ್ಟು ಹೋರಾಡಿದರು ಎಂದು ವಿವರಿಸಿದರು . ಈಗ ಬಹಳಷ್ಟು ಮಂದಿ ಶಿಕ್ಷಿತರು ತಮ್ಮ ಸಮುದಾಯದಿಂದ ದೂರ ಉಳಿಯುತ್ತಾರೆ ಎಂದರು.

ಶೋಷಿತರಿಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಶಕ್ತಿ ಬಂದಾಗ ಮಾತ್ರ ಜಾತಿ ಪ್ರಭಾವ ಕಡಿಮೆ ಆಗುತ್ತದೆ. ಜಾತಿಗೆ ಚಲನೆ ಇಲ್ಲ. ವರ್ಗಕ್ಕೆ ಮಾತ್ರ ಚಲನೆ ಇದೆ ಎಂದರು.

ಪ್ರತಿಭೆಯನ್ನು ಜಾತಿಯಿಂದ ಅಳೆಯುವುದು ತಪ್ಪು. ವ್ಯಕ್ತಿತ್ವದಿಂದ ಅಳೆಯಬೇಕು ಎಂದರು.

ಸಮಾಜ ಸಮಾನ ಅವಕಾಶಗಳಿಂದ ಪರಿವರ್ತನೆ ಆದಾಗ ಮೀಸಲಾತಿ ಅಗತ್ಯವಿಲ್ಲ. ಜಾತಿ ವ್ಯವಸ್ಥೆ ಇರುವವರೆಗೂ ಮೀಸಲಾತಿ ಅಗತ್ಯ ಎನ್ನುವ ಅಂಬೇಡ್ಕರ್ ಅವರ ಮಾತನ್ನು ಸ್ಮರಿಸಿದರು.

## ನಂದಿನಿ ಲೈಸೆನ್ಸ್‌ದಾರರಿಗೆ ಜರ್ಕಿನ್, ರೈನ್‌ಕೋಟ್ ಟೀಶರ್ಟ್ ವಿತರಣೆ



» **ಚಿತ್ರದುರ್ಗ**

ಜಿಲ್ಲೆಯಲ್ಲಿರುವ ಅಧಿಕೃತ ನಂದಿನಿ ಡೀಲರ್, ಪ್ರಾಂಚೈಸಿ ಹಾಗೂ ಪಾರ್ಲರ್ ಲೈಸೆನ್ಸ್‌ದಾರರ 2024-25 ನೇ ಸಾಲಿನ ವಿಭಾಗೀಯ ಸಭೆ ಮುರುಘಾಮಠದ ಅನುಭವ ಮಂಟಪದಲ್ಲಿ ಇತ್ತೀಚೆಗೆ ನಡೆಯಿತು. ಒಕ್ಕೂಟದ ಅಧ್ಯಕ್ಷರಾದ ಹೆಚ್.ಎನ್.ವಿದ್ಯಾಧರ ಡೀಲರ್‌ದಾರರ ಕುಂದುಕೊರತೆ ಸರ್ಕಾರಿ ಜಾಗಗಳಲ್ಲಿ ಒಕ್ಕೂಟದ ವತಿಯಿಂದ ನಂದಿನಿ ಪಾರ್ಲರನ್ನು ಹೊಸದಾಗಿ ತೆರೆಯುವ ಬಗ್ಗೆ ಹಾಗೂ ಮಾರುಕಟ್ಟೆಯಲ್ಲಿ ನಂದಿನಿ ಪ್ರಾಡೆಕ್ಟ್‌ಗಳಿಗೆ ಬೇಡಿಕೆ ಹೆಚ್ಚಿಸುವ ಕುರಿತು ಚರ್ಚಿಸಿದರು.

ಶಿವಮೊಗ್ಗ, ಚಿತ್ರದುರ್ಗ, ದಾವಣಗೆರೆ ಸಹಕಾರ ಹಾಲು ಒಕ್ಕೂಟದ ನಿರ್ದೇಶಕರುಗಳಾದ ಜಿ.ಪಿ.ರೇವಣಸಿದ್ದಪ್ಪ, ಬಿ.ಸಿ.ಸಂಜೀವಮೂರ್ತಿ, ಬಿ.ಆರ್.ರವಿಕುಮಾರ್‌ಜಿ.ಬಿ.ಶೇಖರ್, ವ್ಯವಸ್ಥಾಪಕ ನಿರ್ದೇಶಕ ಎಸ್.ಜಿ.ಶೇಖರ್, ಒಕ್ಕೂಟದ ಅಧಿಕಾರಿಗಳು ವಿಭಾಗೀಯ ಸಭೆಯಲ್ಲಿ ಭಾಗವಹಿಸಿದ್ದರು. ಡೀಲರ್‌ಗಳಿಗೆ ಟಾರ್ಪಲಿನ್ ಬ್ಯಾಗ್, ಜರ್ಕಿನ್, ರೈನ್‌ಕೋಟ್, ಟೀಶರ್ಟ್‌ಗಳನ್ನು ವಿತರಿಸಲಾಯಿತು. ಜಿಲ್ಲೆ ಹಾಗೂ ತಾಲ್ಲೂಕು ಮಟ್ಟಗಳಲ್ಲಿ ಅತಿ ಹೆಚ್ಚು ಹಾಲು ಮತ್ತು ಉತ್ಪನ್ನಗಳನ್ನು ಮಾರಾಟ ಮಾಡಿದ ಡೀಲರ್‌ಗಳಿಗೆ ಹಾಗೂ ಎಸ್.ಎಸ್.ಎಲ್.ಸಿ. ಮತ್ತು ದ್ವಿತೀಯ ಪಿ.ಯು.ಸಿ.ಯಲ್ಲಿ ಅತಿ ಹೆಚ್ಚಿನ ಅಂಕಗಳನ್ನು ಗಳಿಸಿರುವ ಡೀಲರ್‌ದಾರರ ಮಕ್ಕಳಿಗೆ ನಗದು ಪುರಸ್ಕಾರ, ಅಭಿನಂದನಾ ಪತ್ರ ಹಾಗೂ ನೆನಪಿನ ಕಾಣಿಕೆಗಳನ್ನು ನೀಡಿ ಸನ್ಮಾನಿಸಲಾಯಿತು.

## ಮಹಿಳಾ ಆಯೋಗದ ಅಧ್ಯಕ್ಷೆ ಬಗ್ಗೆ ಹಗುರಮಾತು ಕ್ರಮಕ್ಕೆ ಆಗ್ರಹ

» **ಚಿತ್ರದುರ್ಗ**

ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ ಬಗ್ಗೆ ಅವಹೇಳನಕಾರಿ ಮಾತುಗಳನ್ನಾಡಿರುವ ಕೆ.ಎನ್. ಜಗದೀಶ್‌ಕುಮಾರ್ ಮೇಲೆ ಕಾನೂನು ರೀತಿಯ ಕ್ರಮ ಕೈಗೊಳ್ಳುವಂತೆ ಜಿಲ್ಲಾ ಮಹಿಳಾ ಕಾಂಗ್ರೆಸ್ ಉಪಾಧ್ಯಕ್ಷೆ ಪವಿತ್ರ ಜಿಲ್ಲಾ ರಕ್ಷಣಾಧಿಕಾರಿಗೆ ಮಂಗಳವಾರ ಮನವಿ ಸಲ್ಲಿಸಿದರು.

ನಾಗಲಕ್ಷ್ಮಿ ಚೌಧರಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆಯಾದಾಗಿನಿಂದಲೂ 26 ಜಿಲ್ಲೆಗಳಲ್ಲಿ ಮಿಂಚಿನ ಪ್ರವಾಸ ನಡೆಸಿ ಮಹಿಳೆಯರ ಮೇಲಾಗುತ್ತಿರುವ ದೌರ್ಜನ್ಯ, ದಬ್ಬಾಳಿಕೆ, ಅತ್ಯಾಚಾರಗಳ ವಿರುದ್ದ ಹೆಣ್ಣು ಮಕ್ಕಳಲ್ಲಿ ಅರಿವು ಮೂಡಿಸಿ ಮಹಿಳೆಯರ ರಕ್ಷಣೆಗಾಗಿಯೇ ಇರುವ ಕಾನೂನುಗಳ ಬಗ್ಗೆ ಜಾಗೃತಿ ಮೂಡಿಸುತ್ತಿರುವುದನ್ನು ಸಹಿಸಿಕೊಳ್ಳದ ಕೆ.ಎನ್.ಜಗದೀಶ್‌ಕುಮಾರ್ ಹಗುರವಾಗಿ ಮಾತನಾಡಿರುವುದು ಖಂಡನೀಯ. ತಕ್ಷಣವೆ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ಅಹಿಂದ ಕಾರ್ಮಿಕ ಅಧ್ಯಕ್ಷ ಪಾಂಡುರಂಗಪ್ಪ, ನಾಗಲಕ್ಷ್ಮಿಚೌಧರಿ ಅಭಿಮಾನಿಗಳ ಬಳಗದ ರಮೇಶ್ ನಂದಿಹಳ್ಳಿ, ಓಂಕಾರಪ್ಪ, ಹರಿಯಬ್ಬೆ ತಿಪ್ಪೇಸ್ವಾಮಿ ಇವರುಗಳು ಈ ಸಂದರ್ಭದಲ್ಲಿದ್ದರು.



**ಪ್ರಮುಖ ಸುದ್ದಿ**

# ಬಿಜೆಪಿ ಮಾಡುತ್ತಿರುವ ಅಪಪ್ರಚಾರ ಸಂಪೂರ್ಣ ಸತ್ಯಕ್ಕೆ ದೂರ

» **ಬೆಂಗಳೂರು**

ಕನ್ನಡ ಭಾಷೆಯನ್ನು ನಿರ್ಲಕ್ಷಿಸಿ ಉರ್ದು ಭಾಷೆಗೆ ರಾಜ್ಯ ಸರ್ಕಾರ ಹೆಚ್ಚಿನ ಅನುದಾನ ನೀಡುತ್ತಿದೆ ಎಂದು ರಾಜ್ಯ ಬಿಜೆಪಿ ಮಾಡುತ್ತಿರುವ ಅಪಪ್ರಚಾರ ಸಂಪೂರ್ಣ ಸತ್ಯಕ್ಕೆ ದೂರವಾಗಿದ್ದು, ಕೋಮುವೈಷಮ್ಯ ಹುಟ್ಟಿಸುವ ದುರುದ್ದೇಶದಿಂದ ಕೂಡಿದ್ದಾಗಿದೆ. ಒಂದು ರಾಷ್ಟ್ರೀಯ ಪಕ್ಷ ಇಷ್ಟೊಂದು ಬೇಜವಾಬ್ದಾರಿತನದಿಂದ ಕಿಡಿಗೇಡಿ ಟ್ರೋಲರ್ ಗಳ ರೀತಿ ಸುಳ್ಳು ಸುದ್ದಿಯನ್ನು ಪ್ರಚಾರ ಮಾಡುತ್ತಿರುವುದು ವಿಷಾದನೀಯ.



2025-26ನೇ ಸಾಲಿನಲ್ಲಿ ರಾಜ್ಯ ಸರ್ಕಾರವು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಗೆ □34,438 ಕೋಟಿ ಮತ್ತು ಸಮಾಜ ಕಲ್ಯಾಣ ಮತ್ತಿತರ ಇಲಾಖೆಗಳಿಗೆ ಸೇರಿದ ಶಾಲೆಗಳಿಗೆ □4,150 ಕೋಟಿ ಹೀಗೆ ಕನ್ನಡ ಭಾಷೆಯ ಶಾಲೆಗಳಿಗಾಗಿಯೇ ರಾಜ್ಯ ಸರ್ಕಾರ ಒಟ್ಟು 38,688 ಕೋಟಿ ರೂ.ಗಳನ್ನು ನೀಡಿದೆ.

ಇದರ ಜೊತೆಯಲ್ಲಿ ಸರ್ಕಾರಿ ಶಾಲೆಗಳ ನಿರ್ವಹಣೆ ಮತ್ತು ಮೂಲಭೂತ ಸೌಕರ್ಯಗಳ ನಿರ್ಮಾಣಕ್ಕಾಗಿ ಒಟ್ಟು 999.30 ಕೋಟಿ ರೂ.ಗಳ ಅನುದಾನವನ್ನು ಒದಗಿಸಲಾಗಿದೆ. ಈ ಒಟ್ಟು ಅನುದಾನ ಕನ್ನಡ ಭಾಷೆಯ ಅಭಿವೃದ್ಧಿಗಾಗಿಯೇ ವ್ಯಯವಾಗಲಿದೆ. ಹೀಗಿರುವಾಗ ಕನ್ನಡ ಭಾಷೆಗೆ ರಾಜ್ಯ ಸರ್ಕಾರ ಕೇವಲ 32 ಕೋಟಿ ರೂಪಾಯಿ ಅನುದಾನ ನೀಡುತ್ತಿದೆ ಎಂಬ ಮಾಹಿತಿಯ ಪ್ರಸಾರದ ಹಿಂದೆ ರಾಜಕೀಯ ದುರುದ್ದೇಶ ಇರುವುದು ಸ್ಪಷ್ಟವಾಗುತ್ತದೆ.

ಅತಿ ಹೆಚ್ಚು ವಿದ್ಯಾರ್ಥಿಗಳ ದಾಖಲಾತಿ ಇರುವ ರಾಜ್ಯದ ಉರ್ದು ಮಾಧ್ಯಮ ಶಾಲೆಗಳಿಗೆ ಕರ್ನಾಟಕ ಪಬ್ಲಿಕ್ ಶಾಲೆ ಮಾದರಿಯಲ್ಲಿ ಮೂಲಸೌಕರ್ಯಗಳನ್ನು ಒದಗಿಸಿ ಬೋಧನೆಯ ಗುಣಮಟ್ಟವನ್ನು ಹೆಚ್ಚಿಸುವ ಹಾಗೂ ಮೌಲಾನ ಪಬ್ಲಿಕ್ ಶಾಲೆಗಳನ್ನಾಗಿ ಉನ್ನತೀಕರಿಸುವ ಉದ್ದೇಶದಿಂದಪ್ರಸಕ್ತಹಣಕಾಸು ವರ್ಷದಲ್ಲಿ 100 ಕೋಟಿ ರೂ.ಗಳನ್ನು ಅಲ್ಪಸಂಖ್ಯಾತ ಇಲಾಖೆಯಡಿ ಒದಗಿಸಲಾಗಿದೆ.

ಈ ಅನುದಾನವನ್ನು ಕೇವಲ ಭಾಷಾ ಕಲಿಕೆಗೆ ಮಾತ್ರವಲ್ಲ ಶಾಲಾ ಮೂಲಸೌಕರ್ಯ, ಶಿಕ್ಷಕರ ನೇಮಕಾತಿಗಾಗಿ, ಪಠ್ಯಪುಸ್ತಕಗಳು ಮತ್ತು ಹೊಸ ಶಾಲಾ ಕಟ್ಟಡಗಳ ನಿರ್ಮಾಣಕ್ಕೂ ಬಳಸಲಾಗುವುದು.

ಕನ್ನಡ, ಉರ್ದು ಭಾಷೆಗಳು ಸೇರಿದಂತೆ ಯಾವುದೇ ಭಾಷೆಯನ್ನು ನಿರ್ದಿಷ್ಠ ಜಾತಿ, ಧರ್ಮದ ಜೊತೆ ಜೋಡಿಸುವುದು ಆ ಭಾಷೆಗಳಿಗೆ ತೋರುವ ಅಗೌರವವಾಗುತ್ತದೆ. ನಮ್ಮ ಸರ್ಕಾರ ರಾಜ್ಯದಲ್ಲಿ ಬಳಕೆಯಲ್ಲಿರುವ ಎಲ್ಲ ಭಾಷೆಗಳ ಬಗ್ಗೆ ಸಮಾನ ಕಾಳಜಿಯನ್ನು ಹೊಂದಿದೆ. ಇದೇ ಸದುದ್ದೇಶದಿಂದ ರಾಜ್ಯದಲ್ಲಿ ಬಳಕೆಯಲ್ಲಿರುವ ತುಳು, ಕೊಂಕಣಿ, ಅರೆಬಾಸೆ, ಕೊಡವ ಭಾಷೆಗಳಿಗಾಗಿಯೇ ಪ್ರತ್ಯೇಕ ಅಕಾಡೆಮಿಗಳನ್ನು ಸ್ಥಾಪಿಸಲಾಗಿದ್ದು, ಇವುಗಳಿಗೆ ವಾರ್ಷಿಕ 80 ಲಕ್ಷ ರೂಪಾಯಿಗಳ ಅನುದಾನವನ್ನು ನೀಡಲಾಗುತ್ತದೆ. ಇದರ ಜೊತೆಗೆ ವಿಶೇಷ ಕಾರ್ಯಕ್ರಮಗಳಿಗಾಗಿ ಹೆಚ್ಚುವರಿ ಅನುದಾನವನ್ನು ನೀಡಲಾಗುತ್ತದೆ.

ಕನ್ನಡ ಭಾಷೆ ಮತ್ತು ಸಾಹಿತ್ಯಕ್ಕೆ ಪ್ರೋತ್ಸಾಹ ನೀಡುವ ಉದ್ದೇಶಕ್ಕಾಗಿಯೇ ಪ್ರತ್ಯೇಕ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇದೆ. ಇದರಡಿಯಲ್ಲಿ 14 ಅಕಾಡೆಮಿಗಳು, 3 ಪ್ರಾಧಿಕಾರ ಮತ್ತು ಸಾಹಿತಿಗಳ ಹೆಸರಿನ 24 ಟ್ರಸ್ಟ್ ಗಳು ಕಾರ್ಯನಿರ್ವಹಿಸುತ್ತಿವೆ. ಇವೆಲ್ಲವೂ ಕನ್ನಡ, ಕನ್ನಡಿಗ ಮತ್ತು ಕರ್ನಾಟಕಕ್ಕೆ ಮೀಸಲಾಗಿವೆ.

ಕನ್ನಡ ಭಾಷೆಗೆ ಕನ್ನಡಿಗರೆಲ್ಲರೂ ತಾಯಿಯ ಸ್ಥಾನವನ್ನು ನೀಡಿದ್ದು ಇದೇ ಗೌರವವನ್ನು ನಮ್ಮ ಸರ್ಕಾರ ಕೂಡಾ ಹೊಂದಿದೆ. ನೆಲ-ಜಲ-ಭಾಷೆಯ ರಕ್ಷಣೆಯ ವಿಚಾರದಲ್ಲಿ ಯಾವುದೇ ರಾಜಿ ಇಲ್ಲ ಎನ್ನುವುದನ್ನು ನಾನು ಪದೇ ಪದೇ ಹೇಳಿಕೊಂಡು ಬಂದಿದ್ದೇನೆ. ಇದೇ ರೀತಿ ನಾಡು-ನುಡಿಗೆ ಬಗೆವ ಅವಮಾನವನ್ನು ಕೂಡಾ ನಮ್ಮ ಸರ್ಕಾರ ಸಹಿಸುವುದಿಲ್ಲ.

ಹೀಗಿರುವಾಗ ಕನ್ನಡ ಭಾಷೆಗಾಗಿ ಕೇವಲ 32 ಕೋಟಿ ರೂಪಾಯಿ ನೀಡಲಾಗಿದೆ ಎಂಬ ಸುಳ್ಳು ಸುದ್ದಿಯನ್ನು ರಾಜ್ಯ ಬಿಜೆಪಿ ಹಂಚಿಕೊಂಡು ಜನರನ್ನು ತಪ್ಪು ದಾರಿಗೆಳೆಯುತ್ತಿರುವುದು ಅಕ್ಷಮ್ಯ ಅಪರಾಧ ಮಾತ್ರವಲ್ಲ ಕನ್ನಡ ನಾಡು ಮತ್ತು ನುಡಿಗೆ ಬಗೆವ ದ್ರೋಹವಾಗಿದೆ. ರಾಜ್ಯ ಬಿಜೆಪಿ ತಕ್ಷಣ ಸ್ಪಷ್ಟೀಕರಣದ ಮೂಲಕ ಸತ್ಯ ಸಂಗತಿಯನ್ನು ತಿಳಿಸುವ ಜೊತೆಯಲ್ಲಿ ತಮ್ಮಿಂದ ಆಗಿರುವ ತಪ್ಪಿಗೆ ರಾಜ್ಯದ ಜನತೆಯ ಕ್ಷಮೆ ಕೇಳಬೇಕೆಂದು ಆಗ್ರಹಿಸುತ್ತೇನೆ.

**ಫಾಸ್ಟ್ ನ್ಯೂಸ್**

### ಪಿ.ಸಿ.& ಪಿ.ಎನ್.ಡಿ.ಟಿ ಸಭೆ

» **ದಾವಣಗೆರೆ**

ಪಿ.ಸಿ & ಪಿ.ಎನ್. ಡಿ.ಟಿ ಜಿಲ್ಲಾ ಸಲಹಾ ಸಮಿತಿ ಸಭೆಯನ್ನು ಮೇ.28 ರಂದು ಸಂಜೆ 4.30ಕ್ಕೆ ನಗರದ ಉಪವಿಭಾಗಾಧಿಕಾರಿಗಳ ಕಚೇರಿಯಲ್ಲಿ ಆಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯಾಧಿಕಾರಿ ತಿಳಿಸಿದ್ದಾರೆ.

### ನಾಯಿ ಕಾಣೆ, ಪತ್ತೆಗೆ ಮನವಿ

» **ದಾವಣಗೆರೆ**

ಮೇ.26 ರಂದು ಸಂಜೆ 6.15ಕ್ಕೆ ನಗರದ ಎಸ್.ಎಸ್, ನಿಜಲಿಂಗಪ್ಪ ಬಡಾವಣೆಯ 3 ನೇ ಮುಖ್ಯರಸ್ತೆಯಲ್ಲಿ Brador Retriever ಜಾತಿಯ ಬಿಳಿ ಬಣ್ಣದ 1 ವರ್ಷ 1 ತಿಂಗಳಿನ ಗಂಡು ಸಾಕು ನಾಯಿ ಮನೆಯಿಂದ ಕಾಣೆಯಾಗಿರುತ್ತದೆ. ಚಹರೆ ವಿವರ: ಕತ್ತಿನಲ್ಲಿ ಕೆಂಪು ಪಟ್ಟಿ ಇರುತ್ತದೆ. ಹುಡುಕಿ ಕೊಟ್ಟವರಿಗೆ ಸೂಕ್ತ ಬಹುಮಾನ ಕೊಡಲಾಗುವುದು. ಸುಳಿವು ಸಿಕ್ಕರೆ ಮೊ.ಸಂ:7204352339 ಗೆ ಮಾಹಿತಿ ನೀಡುವಂತೆ ವಿದ್ಯಾನಗರ ಪೊಲೀಸ್ ಠಾಣಾಧಿಕಾರಿ ತಿಳಿಸಿದ್ದಾರೆ.

### ಉದ್ದಿಮೆ ಪರವಾನಿಗೆ ಶುಲ್ಕವನ್ನು ಪರಿಷ್ಕರಿಸಲು ಆಕ್ಷೇಪಣೆಗಳಿಗೆ ಆಹ್ವಾನ

» **ದಾವಣಗೆರೆ**

ಮಹಾನಗರಪಾಲಿಕೆಯ ವ್ಯಾಪ್ತಿಯಲ್ಲಿ ಬರುವ ಉದ್ದಿಮೆದಾರರುಗಳಿಗೆ, ಉದ್ದಿಮೆ ಪರವಾನಗಿ ಶುಲ್ಕವನ್ನು ಪರಿಷ್ಕರಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ. ಪರಿಷ್ಕೃತ ಪಟ್ಟಿಯನ್ನು ಮಹಾನಗರಪಾಲಿಕೆಯ ವೆ□□ಸೈ□□ನಲ್ಲಿ http://www.davanagerecity.mrc.gov.in/en/home ಮತ್ತು ಕಛೇರಿಯ ಸೂಚನಾ ಫಲಕದಲ್ಲಿ ಅಳವಡಿಸಲಾಗಿದೆ. 30-03-2017ರಲ್ಲಿ ಮತ್ತು ಪುನಃ ದಿನಾಂಕ: 01-04-2024ರಲ್ಲಿ ದರ ಪರಿಷ್ಕರಣೆಗೊಂಡಿರುತ್ತದೆ. ಪರಿಷ್ಕರಣೆಗೊಂಡ ದರಗಳು ಅತೀ ಕಡಿಮೆ ಇರುವುದರಿಂದ ಪಾಲಿಕೆಯ ಆರ್ಥಿಕ ಪರಿಸ್ಥಿತಿಯನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಉದ್ದಿಮೆ ಪರವಾನಿಗೆಯ ಶುಲ್ಕವನ್ನು ಪಾಲಿಕೆ ಆಡಳಿತಾಧಿಕಾರಿಗಳು ಜೂನ್-2025ರ ಮಾಹೆಯಿಂದ ಉದ್ದಿಮೆ ಪರವಾನಿಗೆ ಶುಲ್ಕವನ್ನು ಪರಿಷ್ಕರಿಸಲಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಅಥವಾ ಉದ್ದಿಮೆ ಪರವಾನಿಗೆಯನ್ನು ಪರಿಷ್ಕರಿಸಲು ಸಾರ್ವಜನಿಕರ ಆಕ್ಷೇಪಣೆಗಳಿದ್ದಲ್ಲಿ ಮಹಾನಗರಪಾಲಿಕೆಯ ವೆಬ್ ಸೈ□□ನಲ್ಲಿ ಆಕ್ಷೇಪಣೆ ಸಲ್ಲಿಸಬಹುದು ಎಂದು ತಿಳಿಸಿರುತ್ತಾರೆ.

### ಶ್ರೀರಂಗಪಟ್ಟಣದಲ್ಲಿ ನಡೆದ ಟಿಪ್ಪುಸುಲ್ತಾನ್ ಗಂಧ ಮತ್ತು ಉತ್ಸವಕ್ಕೆ ಚಿತ್ರದುರ್ಗದ ಬಡಮಕಾನ್‌ನಿಂದ ಗಂಧ



» **ಚಿತ್ರದುರ್ಗ**

ಶ್ರೀರಂಗಪಟ್ಟಣದಲ್ಲಿ ಮಂಗಳವಾರ ನಡೆದ ಮೈಸೂರು ಹುಲಿ ಹಜರತ್ ಟಿಪ್ಪುಸುಲ್ತಾನ್‌ರವರ 233 ನೇ ಗಂಧ ಮತ್ತು ಉತ್ಸವಕ್ಕೆ ಚಿತ್ರದುರ್ಗದ ಬಡಾ ಮಕಾನ್‌ನಿಂದ ಬೆಳಿಗ್ಗೆ ಗಂಧ ತೆಗೆದುಕೊಂಡು ಹೋಗಿ ಸಮರ್ಪಿಸಲಾಯಿತು. ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ ಗಂಧ ತೆಗೆದುಕೊಂಡು ಹೋಗುವ ವೇಳೆ ಮಾತನಾಡಿ ಪ್ರತಿ ವರ್ಷದಂತೆ ಈ ಬಾರಿಯೂ ಚಿತ್ರದುರ್ಗದ ಬಡಾ ಮಕಾನ್‌ನಿಂದ ಗಂಧ ತೆಗೆದುಕೊಂಡು ಹೋಗುತ್ತಿದ್ದೇವೆ. ದೇಶ ವಿದೇಶಗಳಿಂದ ಟಿಪ್ಪುಸುಲ್ತಾನ್‌ರವರ ಅಪಾರ ಅಭಿಮಾನಿಗಳು ಗಂಧ ಮತ್ತು ಉತ್ಸವದಲ್ಲಿ ಪಾಲ್ಗೊಂಡು ಲೋಕ ಕಲ್ಯಾಣಾರ್ಥವಾಗಿ ಪ್ರಾರ್ಥಿಸಲಿದ್ದಾರೆಂದು ಹೇಳಿದರು. ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾವೇದಿಕೆ ರಾಜ್ಯ ಪ್ರಧಾನ ಕಾರ್ಯದರ್ಶಿ ಸಿರಾಜುದ್ದಿನ್ ಸುಲ್ತಾನ್, ಕರುನಾಡ ರಕ್ಷಣಾ ವೇದಿಕೆ ಅಧ್ಯಕ್ಷ ಸೈಯದ್ ಇಸ್ಮಾಯಿಲ್, ಫೈಲ್ವಾನ್ ಸದ್ದಾಂ, ಶಹಬಾಜ್, ಖಯೂಂ, ಜಿಯಾವುಲ್ಲಾ, ಫೈಲ್ವಾನ್ ಅಫೀಜ್, ಅಸ್ಲಾಂ, ನಸರ್‌ಬೇಗ್, ನಜ್ಮತಾಜ್ ಇವರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

### ಹರಿಹರ ನಗರದಲ್ಲಿ ಇಂದು ಕರೆಂಟ್ ಇರಲ್ಲ

» **ಹರಿಹರ**

220/66 ಕೆ.ವಿ ಸಾಸ್ ಗುತ್ತೂರು ಹಾಗೂ 66/11 ಕೆ.ವಿ ಗುತ್ತೂರು ವಿ.ವಿ ಕೇಂದ್ರಗಳಲ್ಲಿ ತ್ರೈಮಾಸಿಕ ನಿರ್ವಹಣೆಯನ್ನು ಹಮ್ಮಿಕೊಂಡಿರುವುದರಿಂದ ನಾಳೆ ಮೇ.28 ರ ಬುಧವಾರ ಬೆಳಗ್ಗೆ 10.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ 6 ಎಲ್ಲಾ 11 ಕೆ.ವಿ ಮಾರ್ಗಗಳ ವಿದ್ಯುತ್ ವ್ಯತ್ಯಯವಾಗಲಿದ್ದು ಗ್ರಾಹಕರು ಸಹಕರಿಸಬೇಕಾಗಿ ಬೆಸ್ಕಾಂ ಹರಿಹರ ವಾ.ಕಾ ಮತ್ತು ಪಾ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್ (ವಿ ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಫಾಸ್ಟ್ ನ್ಯೂಸ್

### ಶಿಕ್ಷಕರಿಗೆ 2 ಸಾವಿರ ಹೆಚ್ಚುವರಿ ವೇತನ- ಸಚಿವ ಮಧು ಬಂಗಾರಪ್ಪ

» ಶಿವಮೊಗ್ಗ

ತಮನ್ನಾರನ್ನ ಮಾರ್ಕೆಟಿಂಗ್ ಸ್ಟ್ರಾಟಜಿಗಾಗಿ ಮೈಸೂರು ಸ್ಯಾಂಡಲ್ ಸೋಪ್ ರಾಯಭಾರಿಯನ್ನಾಗಿ ಮಾಡಿದ್ದಾರೆ. ಒಂದು ವೇಳೆ ತಮ್ಮನ್ನಾರನ್ನ ವಿರೋಧಿಸುವುದಾದ್ರೆ ಅವರ ಚಿತ್ರಗಳನ್ನು ನೀವು ನೋಡಬೇಡಿ ಅಂತ ಸಚಿವ ಮಧು ಬಂಗಾರಪ್ಪ ಹೇಳಿದ್ದಾರೆ. ಅವರು ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿ, ಮೈಸೂರು ಸ್ಯಾಂಡಲ್ ಸೋಪ್ ರಾಯಭಾರಿಯನ್ನಾಗಿ ಅವರನ್ನು ಆಯ್ಕೆ ಮಾಡಿದ್ದಾರೆ ಎಂದು ಮಧು ಬಂಗಾರಪ್ಪ ಸಮರ್ಥಿಸಿಕೊಂಡಿದ್ದಾರೆ. ಈ ಸಂದರ್ಭ ಶಿಕ್ಷಕರಿಗೆ 2,000 ಹೆಚ್ಚುವರಿ ಸಂಬಳ ನೀಡುವುದಾಗಿ ಪ್ರಕಟಿಸಿದ್ದಾರೆ. ಯಾವ ವಿಷಯವಿದ್ದರೂ ಟೀಕೆಗಳು ಇದ್ದೇ ಇರುತ್ತದೆ. ಬಹುಶಃ ಮಾರ್ಕೆಟಿಂಗ್ ಸ್ಟ್ರಾಟಜಿಗಾಗಿ ಈ ರೀತಿ ಮಾಡಿರಬಹುದು. ಒಂದು ವೇಳೆ ತಮ್ಮನ್ನಾರನ್ನು ವಿರೋಧಿಸುವುದಾದ್ರೆ ಅವರ ಚಿತ್ರಗಳನ್ನು ನೀವು ನೋಡಬೇಡಿ. ತಮನ್ನಾ ನಟ ಶಿವರಾಜ್ ಕುಮಾರ್ ಜತೆ ತಮಿಳಿನ ಜೈಲರ್ ಸಿನಿಮಾದಲ್ಲಿ ನಟಿಸಿಲ್ಲವೇ? ಕೆಎಸ್‌ಡಿಎಲ್ ಒಂದು ಸಾರ್ವಜನಿಕ ಸ್ವತಂತ್ರ ಸಂಸ್ಥೆಯಾಗಿ ಅದಕ್ಕೆ ತನ್ನದೇ ನಿರ್ಧಾರ ಕೈಗೊಳ್ಳುವ ಹಕ್ಕು ಇದೆ. ಪ್ರತಿಯೊಂದರಲ್ಲೂ ತಪ್ಪು ಹುಡುಕೋದು ಸರಿಯಲ್ಲ. ಅವರು ಎಲ್ಲಾ ರೀತಿಯಲ್ಲಿ ಯೋಚಿಸಿ ಸೂಕ್ತ ನಿರ್ಧಾರ ಕೈಗೊಂಡಿರುತ್ತಾರೆ. ಎಲ್ಲದರಲ್ಲೂ ತಪ್ಪು ಹುಡುಕುವ ಚಾಳಿ ಇದ್ದರೆ ಅದನ್ನು ರಿಪೇರಿ ಮಾಡಲು ಆಗುವುದಿಲ್ಲ ಎಂದು ಮಧು ಬಂಗಾರಪ್ಪ ಹೇಳಿದ್ದಾರೆ.

**ರಾಜ್ಯದಲ್ಲಿ 51 ಸಾವಿರ ಶಿಕ್ಷಕರಿಗೆ 2,000 ಹೆಚ್ಚಿನ ವೇತನ:** ರಾಜ್ಯದಲ್ಲಿ ನೇಮಕ ಆಗಲಿರುವ 51 ಸಾವಿರ ಶಿಕ್ಷಕರ ವಿಚಾರಕ್ಕೆ ಅವರು ಪ್ರತಿಕ್ರಿಯಿಸಿ, ಹಿಂದಿನ ಸರ್ಕಾರಗಳು ಈ ವಿಷಯದಲ್ಲಿ ತಡವಾಗಿ ಕ್ರಮ ಕೈಗೊಳ್ಳುತ್ತಿದ್ದವು. ಏಕೆಂದರೆ ಒಂದು ತಿಂಗಳ ವಿಳಂಬವಾಗಿ ನೇಮಕ ಮಾಡಿದರೂ ಸರ್ಕಾರಕ್ಕೆ ಭಾರೀ ಉಳಿತಾಯವಾಗುತ್ತಿತ್ತು. ಆದರೆ, ಸಿದ್ದರಾಮಯ್ಯ ಅವರ ಸರ್ಕಾರದ ಬೊಕ್ಕಸ ಭರ್ತಿಯಾಗಿದೆ. ಹಾಗಾಗಿ 51 ಸಾವಿರ ಶಿಕ್ಷಕರ ನೇಮಕ ಮಾಡಿದ್ದೇವೆ. ಇದೇ ಮೇ 29, 30 ರಂದು ಶಾಲೆ ಆರಂಭವಾಗಲಿದೆ. ಶಿಕ್ಷಕರ ನೇಮಕಾತಿ ಸಂದರ್ಭ ಸದ್ಯದಲ್ಲಿಯೇ ಬೆಂಗಳೂರಿನಲ್ಲಿ ದೊಡ್ಡ ಮಟ್ಟದ ಕಾರ್ಯಕ್ರಮ ನಡೆಯಲಿದೆ. ಈ 51 ಸಾವಿರ ಶಿಕ್ಷಕರಿಗೂ ನಾವು ಈ ವರ್ಷದಿಂದ 2,000 ಸೇರಿಸಿ ಕೊಡುತ್ತಿದ್ದೇವೆ. ಸಿದ್ದರಾಮಯ್ಯ ಸರ್ಕಾರದ ಖಜಾನೆ ಭರ್ತಿ ಆಗಿರುವುದರಿಂದ ಕೊಡುತ್ತಿದ್ದೇವೆ ಎಂದು ಹೇಳಿದ್ದಾರೆ.

### ಭಾರತದಲ್ಲಿ ಮುಂದಿನ ಯುಗಾದಿಯವರೆಗೂ ಸಮಸ್ಯೆಗಳು ಹೆಚ್ಚು

» ಬೆಂಗಳೂರು

ಚತುರ್‌ಗ್ರಹಗಳ ಸ್ಥಾನ ಪಲ್ಲಟದಿಂದ ಭಾರತದಲ್ಲಿ ಮುಂದಿನ ಯುಗಾದಿಯವರೆಗೂ ಸಮಸ್ಯೆಗಳು ಹೆಚ್ಚಾಗುತ್ತವೆ. ಹೀಗಾಗಿ ಆಡಳಿತ ಪಕ್ಷಗಳು, ಪ್ರತಿಪಕ್ಷಗಳು ಎಚ್ಚರ ವಹಿಸಬೇಕು ಎಂದು ಖ್ಯಾತ ಜ್ಯೋತಿಷಿ ರಾಜಗುರು ದ್ವಾರಕನಾಥ್ ಸಲಹೆ ನೀಡಿದ್ದಾರೆ. ಖಾಸಗಿ ಪತ್ರಿಕೆಯ ಕಚೇರಿಯಲ್ಲಿ ನಡೆದ ಸಂವಾದದಲ್ಲಿ ಮಾತನಾಡಿದ ಅವರು,"ಗ್ರಹಗಳ ಚಲನೆ ಮೇಲೆ ಎಲ್ಲವೂ ನಿರ್ಧಾರವಾಗುತ್ತದೆ. ಶನಿ, ಗುರು, ರಾಹು-ಕೇತು ಸಂಚಾರ ತುಂಬಾ ಮುಖ್ಯ. ಗ್ರಹಗಳ ಚಲನೆಯು ದೇಶದಲ್ಲಿ ಮಹತ್ವದ ಬದಲಾವಣೆ, ಪ್ರಜೆಗಳನ್ನು ಕಾಪಾಡುವ ಮತ್ತು ಕಾಡುವ ಯುದ್ಧ ಭೀತಿಗೆ ಕಾರಣವಾಗಬಹುದು. ಮುಂದಿನ ಯುಗಾದಿಯವರೆಗೆ ಸಮಸ್ಯೆಗಳಿವೆ. ಎರಡು ಸೂರ್ಯಗ್ರಹಣ ಮತ್ತು ಎರಡು ಚಂದ್ರಗ್ರಹಗಳು ಸಂಭವಿಸಲಿವೆ. ಹೀಗಾಗಿ ಎಚ್ಚರ ವಹಿಸಬೇಕು. 2025ರ ಜೂನ್ 22ರ ನಂತರ ಪ್ರಪಂಚದ ಕೆಲವು ದೇಶಗಳಿಗೆ ಭಾರಿ ಕಂಟಕವೂ ಇದೆ. ಹೀಗಾಗಿ ಎಚ್ಚರವಾಗಿರಬೇಕು," ಎಂದರು. ಪ್ರತಿ ಬಾರಿಯೂ ಗ್ರಹಗಳ ಸ್ಥಾನ ಬದಲಾದರೂ, ಈ ಬಾರಿಯ ಚಲನೆ ವಿಶಿಷ್ಟವಾಗಿದೆ. ಹೀಗಾಗಿ ಸಾಕಷ್ಟು ಬದಲಾವಣೆಗಳು ಸಂಭವಿಸಲಿವೆ. ಆದ್ದರಿಂದ ಸನಾತನ ಧರ್ಮದ ಆಶಯಗಳನ್ನು ಎತ್ತಿ ಹಿಡಿಯುವ ಮೂಲಕ ಆಡಳಿತ ಪಕ್ಷದವರು ಜನರನ್ನು ರಕ್ಷಿಸಬೇಕು. ಪ್ರತಿಪಕ್ಷಗಳು ಉತ್ತಮ ಸಲಹೆಗಳನ್ನು ನೀಡುವ ಮೂಲಕ ಸರಕಾರಕ್ಕೆ ಸಹಕಾರ ಕೊಡಬೇಕು. ಯುದ್ಧ ಬಿಕ್ಕಟ್ಟುಗಳು, ಪ್ರಕೃತಿಯಲ್ಲಿ ವಿಷಗಾಳಿ, ಪ್ರಕೃತಿ ವಿಕೋಪದಂತಹ ಸಮಸ್ಯೆಗಳು ಜನರನ್ನು ಬಾಧಿಸಲಿವೆ. ಬೆಳೆ ನಷ್ಟ, ಇಳುವರಿ ಕುಂಠಿತಗೊಂಡು ಬೆಲೆ ಏರಿಕೆಯಾಗುವ ಸಾಧ್ಯತೆಯಿದೆ. ಈ ಬಾರಿ ಆಶಾದಾಯಕ ಸಂಗತಿಯೆಂದರೆ ದೇಶದ ಕ್ರೀಡಾಪಟುಗಳು ಕ್ರೀಡೆಯಲ್ಲಿ ಉತ್ತಮ ಸಾಧನೆ ತೋರಲಿದ್ದಾರೆ," ಎಂದು ತಿಳಿಸಿದ್ದಾರೆ.

**ಪಿಒಕೆ ಪಡೆಯುವ ಸಾಮರ್ಥ್ಯ:** "ರಷ್ಯಾ ಮಾತ್ರ ನಮ್ಮ ಪರ ಇರುವ ರಾಷ್ಟ್ರ. ಉಳಿದಂತೆ ಯಾವ ರಾಷ್ಟ್ರವೂ ನಮ್ಮ ಪರವಾಗಿಲ್ಲ. ಹೀಗಾಗಿ ಏಕಾಂಗಿಯಾಗಿ ಯುದ್ಧ ಮಾಡಿದರೂ ಪಾಕ್ ಆಕ್ರಮಿತ ಪ್ರದೇಶವನ್ನು ನಾವು ನಿಸ್ಸಂದೇಹವಾಗಿ ಹಿಂಪಡೆಯಬಹುದು. ಆ ಶಕ್ತಿ ನಮ್ಮ ರಾಷ್ಟ್ರಕ್ಕಿದೆ. ಸೇನೆಯ ಮೂರೂ ಬಗೆಯ ಸೇನೆಗಳು ಒಟ್ಟಾಗಿ ನಿಲ್ಲಬೇಕು. ಯಾಕೆಂದರೆ ಪರಾಭವ ಸಂವತ್ಸರ (ಮುಂದಿನ ಯುಗಾದಿ) ದವರೆಗೆ ಸಮಸ್ಯೆಗಳು ಕಾಡಲಿವೆ," ಎಂದು ದ್ವಾರಕನಾಥ್ ಗುರೂಜಿ ನುಡಿದರು.

**ಸ್ಥಾನಪಲ್ಲಟವಾದ ರಾಶಿಗಳು:** "ಶನಿಯು ಕುಂಭ ರಾಶಿ ಬಿಟ್ಟು ಮೀನ ರಾಶಿಗೆ ಹೋಗಿದೆ. ಮೇ 15ರಂದು ಗುರು ಗ್ರಹವು ವೃಷಭ ರಾಶಿಯಿಂದ ಮಿಥುನ ರಾಶಿಗೆ ಹೋಗಿದೆ.

# ಮಾನವೀಯ ಪ್ರಜ್ಞೆ



ಓದು ನಮ್ಮ ಜ್ಞಾನವನ್ನು ವೃದ್ಧಿಸುತ್ತದೆ. ನಿಜ,

ಹಾಗೆಯೇ ಅದೇ ಓದು ನಮ್ಮ ಮನಸ್ಸುಗಳನ್ನು ಕುಗ್ಗಿಸುತ್ತದೆಯೇ ?.....

ಈ ರೀತಿಯ ಅನುಮಾನ ಬಲವಾಗುತ್ತಿದೆ.



ಮೂಲ ಆಶಯದಲ್ಲಿ ಓದು ನಮ್ಮ ಅರಿವನ್ನು ಹೆಚ್ಚಿಸಿ ನಮ್ಮಲ್ಲಿ ವಿನಯವನ್ನು ಬೆಳೆಸುತ್ತದೆ.

ತುಂಬಿದ ಕೊಡ ತುಳುಕಲು ಸಾಧ್ಯವಿಲ್ಲ ಮತ್ತು ಅವಕಾಶವೂ ಇಲ್ಲ. ಅದು ನಮ್ಮಲ್ಲಿ ಜೀವಪರ ನಿಲುವನ್ನೂ, ವಿನಯವನ್ನು, ಪ್ರಬುದ್ಧತೆಯನ್ನು, ತಾಳ್ಮೆಯನ್ನು ಮತ್ತು ಒಟ್ಟಾರೆ ಸಮಷ್ಟಿ ಪ್ರಜ್ಞೆಯನ್ನು ಬೆಳೆಸುತ್ತದೆ......

ಆದರೆ,

ಅದೇ ಓದು ಬಹಳಷ್ಟು ಜನರಲ್ಲಿ ಅಹಂಕಾರವನ್ನು,

ಸಣ್ಣ ಮನಸ್ಸನ್ನು, ಅಸೂಯಾಪರ ಗುಣವನ್ನು, ಕ್ಷುಲ್ಲಕ ವ್ಯಕ್ತಿತ್ವವನ್ನು ರೂಪಿಸುವ ಸಾಧ್ಯತೆ ಇದೆ.

ನಾನು ಎಲ್ಲರಿಗಿಂತ ಹೆಚ್ಚು ಓದಿದ್ದೇನೆ. ಎಲ್ಲಾ ಶ್ಲೋಕಗಳು, ಅಧ್ಯಾಯಗಳು, ಮಂತ್ರಗಳು, ಕಾಲಂಗಳು ನನಗೆ ನೆನಪಿದೆ, ನಾನು ಅದನ್ನು ಅತ್ಯಂತ ಸಮರ್ಥವಾಗಿ ನೆನಪಿಟ್ಟು ವಾದಿಸಬಲ್ಲೆ, ನನ್ನ ಸಹವರ್ತಿಗಳಿಗೆ ಆ ಮಟ್ಟದ ನೆನಪು ಮತ್ತು ಜ್ಞಾನ ಇಲ್ಲ, ಅವರ ವಾದಕ್ಕೆ ಹೆಚ್ಚಿನ ಪ್ರಾಮುಖ್ಯತೆ ಇಲ್ಲ ಎಂದು ಸಹಜ ಸಾಮಾನ್ಯ ಜನರನ್ನು ಕೀಳಾಗಿ ಕಾಣುವ ಮನೋಭಾವ ಕಂಡುಬರುತ್ತಿದೆ....

ಪ್ರಾರಂಭದ ದಿನಗಳಲ್ಲಿ ಅಕ್ಷರ ಬರದವರನ್ನು, ಅನಂತರ ಸಂಸ್ಕೃತ ಕಲಿಯದವರನ್ನು, ನಂತರ ಇಂಗ್ಲೀಷ್ ಮಾತನಾಡದವರನ್ನು ಬಹಳ ಲಘುವಾಗಿ ಕಾಣಲಾಗುತ್ತಿತ್ತು.

ಈಗ ಹೃದಯದ ಭಾಷೆಗಿಂತ ಮೆದುಳಿನ ಭಾಷೆಗೆ ಹೆಚ್ಚಿನ ಮಹತ್ವ ಕೊಡುತ್ತಿರುವುದು ಕಂಡುಬರುತ್ತಿದೆ......

ಭಗವದ್ಗೀತೆಯ ಶ್ಲೋಕಗಳನ್ನು,
ಖುರಾನಿನ ಅಧ್ಯಾಯಗಳನ್ನು,
ಬೈಬಲ್‌ನ ಸಂದೇಶಗಳನ್ನು,
ಸಾಹಿತ್ಯದ ಪ್ರಕಾರಗಳನ್ನು,
ಭಾಷೆಯ ವ್ಯಾಕರಣವನ್ನು,
ಆರ್ಥಿಕತೆಯ ಸೂಕ್ಷ್ಮತೆಯನ್ನು,
ಧಾರ್ಮಿಕ ಆಚರಣೆಗಳನ್ನು,

ಕಲೆಯ ಹೊಳಹುಗಳೂ ಸೇರಿ ಯಾವುದೇ ಕ್ಷೇತ್ರದ ಜ್ಞಾನದ ಮೇಲೆ ಒಬ್ಬರಿಗೆ ಹೆಚ್ಚಿನ ನಿಯಂತ್ರಣ ಸಾಧ್ಯವಾಗಿದ್ದರೆ ಅದು ಆ ವ್ಯಕ್ತಿಯ ಸರಳ ನಡವಳಿಕೆಗೆ ಕಾರಣವಾಗಿ ಸಾಮಾನ್ಯ ಜನರಿಗೆ ಅದನ್ನು ಅತ್ಯಂತ ವಿನಯದಿಂದ ತಲುಪಿಸುವ ಮತ್ತು

ಜ್ಞಾನ ಕೂಡ ಹರಿಯುವ ನೀರಿನಂತೆ, ಅದು ಸದಾ ಕಾಲ ಚಲಿಸುತ್ತಲೇ ಇರುತ್ತದೆ ಅದು ಶಾಶ್ವತ ಅಲ್ಲ, ಬದಲಾವಣೆ ಆಗುತ್ತಲೇ ಇರುತ್ತದೆ, ಇಂದಿನ ನನ್ನ ಜ್ಞಾನ ಮುಂದೆ ಅಪ್ರಸ್ತುತ ವಾಗಬಹುದು ಎಂಬ ಅರಿವು ಓದುವವರಿಗೆ ಇರಬೇಕಾಗುತ್ತದೆ.

ವರ್ತನೆ ಸಹಜವಾಗಿರಬೇಕೆ ಹೊರತು ವಿಚಿತ್ರವಾಗಿರಬಾರದು.....

ಮತ್ತು ಎಲ್ಲಕ್ಕಿಂತ ಹೆಚ್ಚಾಗಿ,

ವಿಶಾಲ ಮನೋಭಾವದ ಪ್ರೀತಿ ವಿಶ್ವಾಸ ತುಂಬಿದ, ಮಾನವೀಯ ಆಧಾರದ,

ಸೌಜನ್ಯದ ನಡವಳಿಕೆ ಅತ್ಯುನ್ನತ ಜ್ಞಾನವೇ ಹೊರತು, ಅಕ್ಷರಗಳ, ಅಧ್ಯಾಯಗಳ, ಪುಟಗಳ , ಶ್ಲೋಕಗಳ, ದಾಖಲೆಗಳ ಜ್ಞಾನ ಕೇವಲ ವಾದ ಪ್ರತಿವಾದಗಳಿಗೆ ಹೊರತು ಸಮಾಜದ ಶಾಂತಿಯ, ನೆಮ್ಮದಿಯ, ಜನರ ಜೀವನಮಟ್ಟ ಸುಧಾರಣೆಯ ದಿಕ್ಕಿನಲ್ಲಿ ಅವುಗಳ ಪಾತ್ರ ಕಡಿಮೆ. ಅದು ಈಗಾಗಲೇ ದೃಢಪಟ್ಟಿದೆ.........

ಹೆಚ್ಚಿಗೆ ಓದಿರುವವರನ್ನು, ತಲೆ ಪ್ರತಿಷ್ಠೆಯವರನ್ನು ನೋಡಿದರೆ ನಾವು ನಿರಪರಾಧಿಗಳಾಗಿದ್ದರೂ ಪೋಲೀಸರನ್ನು ಕಂಡರೆ ಭಯವಾಗುವಂತೆ ಭಾಸವಾಗುತ್ತದೆ......

ನಮ್ಮ ದೇಶದಲ್ಲಿ ಸಾಕ್ಷರತೆಯ ಸಂಖ್ಯೆ ಹೆಚ್ಚಾಗುತ್ತಿದ್ದರೂ, ನಿಜವಾದ ಅರಿವಿರುವವರ ಸಂಖ್ಯೆ ತುಂಬಾ ಕಡಿಮೆಯಿದೆ. ಮುಗ್ಧತೆ ಮತ್ತು ಮೌಢ್ಯತೆಯೇ ಬಹಳಷ್ಟು ತುಂಬಿ ತುಳುಕುತ್ತಿದೆ.......

ನಮಗೆ ಸಾಹಿತ್ಯ, ಸಂಗೀತ, ಕಲೆ, ಧಾರ್ಮಿಕತೆ, ವಿಜ್ಞಾನ ಮುಂತಾದ ವಿಷಯಗಳಲ್ಲಿ ಪಾಂಡಿತ್ಯವಿದೆ ಎಂದ ಮಾತ್ರಕ್ಕೆ ಸಾಮಾನ್ಯರಿಗಿಂತ ಭಿನ್ನ ಎಂದು ಭಾವಿಸಿ ಆ ಕಲೆಗಳಲ್ಲಿಯೇ ಸಾಮಾನ್ಯರಿಗೆ ಅರ್ಥವಾಗದ ಅಭಿಪ್ರಾಯ ವ್ಯಕ್ತಪಡಿಸಿದರೆ ನಿಮಗೆ ಪ್ರಶಸ್ತಿಯೂ, ಬಹುಮಾನವೋ, ಅಧಿಕಾರವೋ, ಡಾಕ್ಟರೇಟೋ ಬರಬಹುದು. ಆದರೆ ವಿನಯ, ಮಾನವೀಯತೆ ಇಲ್ಲದಿದ್ದರೆ, ವಿಶಾಲ ಮನೋಭಾವ ಇಲ್ಲದಿದ್ದರೆ ಎಲ್ಲವೂ ವ್ಯರ್ಥ.

ಪ್ರೀತಿಯ ಗುಣ ಮಾತ್ರ ಈ ಸಮಾಜದ ಒಳ್ಳೆಯ ಬದಲಾವಣೆಗೆ ಕಾರಣವಾಗಬಹುದೇ ಹೊರತು ನಿಮ್ಮ ಅಕ್ಷರ ಜ್ಞಾನ, ಅಹಂಕಾರ, ಸಣ್ಣ ಮನಸ್ಸು, ದ್ವೇಷ ಮನೋಭಾವ ಸಮಾಜಕ್ಕೆ ಮಾರಕ.......

ಬದುಕಿನ ಅನುಭವದ ಸಾಗರದಲ್ಲಿ ಓದು ಒಂದು ಪೂರಕ ಪ್ರಕ್ರಿಯೆಯೇ ಹೊರತು ಓದಿನಿಂದಲೇ ಅನುಭವ ಪಡೆದರೆ ಅದು ಅಜ್ಞಾನದ ಒಣ ರೂಪ ಅಷ್ಟೆ.......

ಸರ್ಕಾರದ, ನ್ಯಾಯಾಲಯಗಳ ರೀತಿಯಲ್ಲಿ ದಾಖಲೆ, ಆಧಾರಗಳು ನಮ್ಮ ಅಭಿಪ್ರಾಯ ರೂಪಿಸದೆ, ನಮ್ಮನ್ನು ನಿಯಂತ್ರಿಸದೆ ಕ್ರಿಯಾತ್ಮಕ ಮನಸ್ಥಿತಿ ನಮ್ಮನ್ನು ಕಾಡಬೇಕು.......

( ಕೆಲವು ಅನಿವಾರ್ಯ ಮತ್ತು ಅಧಿಕೃತ ವಿಷಯಗಳನ್ನು ಹೊರತುಪಡಿಸಿ )......

ಈ ಎಲ್ಲಾ ಅಭಿಪ್ರಾಯ
ನನಗೂ ಅನ್ವಯಿಸುತ್ತದೆ.......
ಧನ್ಯವಾದಗಳು.......
ಪ್ರಬುದ್ಧ ಮನಸ್ಸು ಪ್ರಬುದ್ಧ ಸಮಾಜ,
ಜನರ ಜೀವನಮಟ್ಟ ಸುಧಾರಣೆಯ ಗುರಿಯೊಂದಿಗೆ,
ಮನಗಳಲ್ಲಿ, ಮನೆಗಳಲ್ಲಿ, ಮತಗಳಲ್ಲಿ, ಪರಿವರ್ತನೆಗಾಗಿ,
ಮನಸ್ಸುಗಳ ಅಂತರಂಗದ ಚಳವಳಿ.



» ಲೇಖನ
ವಿವೇಕಾನಂದ. ಹೆಚ್.ಕೆ.
9844013068

# ನೆಹರು ಅವರು ಆಧುನಿಕ ಭಾರತದ ನಿರ್ಮಾತೃ: ಸಿದ್ದರಾಮಯ್ಯ

» ಬೆಂಗಳೂರು

ಸ್ವತಂತ್ರ ಭಾರತದ ಮೊದಲನೇ ಪ್ರಧಾನಿ ಜವಾಹರ್ ಲಾಲ್ ನೆಹರು ಅವರು ಆಧುನಿಕ ಭಾರತದ ನಿರ್ಮಾತೃ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಮಂಗಳವಾರ ವಿಧಾನಸೌಧದ ಪೂರ್ವ ದ್ವಾರದ ಬಳಿ ಇರುವ ಮಾಜಿ ಪ್ರಧಾನ ಮಂತ್ರಿ ದಿವಂಗತ ಪಂಡಿತ್ ಜವಾಹರಲಾಲ್ ನೆಹರು ರವರ ಪುಣ್ಯತಿಥಿಯ ಅಂಗವಾಗಿ ಅವರ ಪ್ರತಿಮೇ ಹಾಗೂ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿದ ನಂತರ ಮಾಧ್ಯಮ ದವರೊಂದಿಗೆ ಮಾತನಾಡಿದರು.

ನೆಹರೂ ಅವರ ಪುಣ್ಯ ತಿಥಿಯನ್ನು ಸರ್ಕಾರ ಗೌರವ ಹಾಗೂ ಅಭಿಮಾನದಿಂದ ನೆರವೇರಿಸಿದೆ. ದೇಶದ ಬಡತನವನ್ನು ಹೋಗಲಾಡಿಸುವ ಪ್ರಾಮಾಣಿಕ ಪ್ರಯತ್ನವನ್ನು ಮಾಡಿದರು. ಉದ್ಯೋಗ ಸೃಷ್ಟಿ, ಮಿಶ್ರ ಆರ್ಥಿಕತೆಯನ್ನು ದೇಶದಲ್ಲಿ ಪರಿಚಯಿಸಿದ್ದಲ್ಲದೆ ದೇಶದಲ್ಲಿ ಹಸಿರು ಕ್ರಾಂತಿಗೆ ಅಡಿಗಲ್ಲು ಹಾಕಿದರು. ಸಹಕಾರಿ ಚಳವಳಿ, ವಿಕೇಂದ್ರೀಕರಣಕ್ಕೆ ಬದ್ಧತೆಯಿಂದ ಕೆಲಸಮಾಡಿದರು. ಅವರು ಪ್ರಧಾನಿಗಳಾಗಿದ್ದ 17 ವರ್ಷಗಳ ಅವಧಿಯಲ್ಲಿ ಅನೇಕ ಅಣೆಕಟ್ಟು, ಸಾರ್ವಜನಿಕ ವಲಯದಲ್ಲಿ ಕೈಗಾರಿಕೆ, ಶಿಕ್ಷಣ ಸಂಸ್ಥೆಗಳನ್ನೂ ಸ್ಥಾಪಿಸಿದರು. ದೇಶ ಆರ್ಥಿಕವಾಗಿ ಸಬಲತೆಯನ್ನು ಕಂಡುಕೊಂಡಿದ್ದರೆ, ಆಹಾರದಲ್ಲಿ ಸ್ವಾವಲಂಬನೆಯನ್ನು ಕಂಡುಕೊಂಡಿದ್ದರೆ ನೆಹರೂ ಅವರು ಹಾಕಿದ ಅಡಿಪಾಯ ಕಾರಣ ಎಂದರು. ನೆಹರೂ ಅವರನ್ನು ಗೌರವದಿಂದ ಸ್ಮರಿಸುವ ಕೆಲಸವನ್ನು ಪ್ರತಿಯೊಬ್ಬ ಭಾರತೀಯನೂ ಮಾಡಬೇಕು ಎಂದರು.



ಆಧುನಿಕ ಭಾರತಕ್ಕೆ ನೆಹರೂ ಅಡಿಪಾಯ ಹಾಕಿರದೇ ಹೋಗಿದ್ದರೆ ಇಂದಿನ ಭಾರತ ಇರುತ್ತಿರಲಿಲ್ಲ. ಆರ್ಥಿಕತೆಯಲ್ಲಿ ಜಗತ್ತಿನಲ್ಲಿ 5 ನೇ ಸ್ಥಾನದಲ್ಲಿದ್ದರೆ ಅದಕ್ಕೆ ನೆಹರೂ ಅವರೇ ಕಾರಣ ಎಂದರು.ಕೋವಿಡ್: ವೃದ್ಧರು, ಕಾಯಿಲೆಯಿರುವವರು ಮಾಸ್ಕ್ ಕಡ್ಡಾಯವಾಗಿ ಹಾಕಿಕೊಳ್ಳುವಂತೆ ಸೂಚಿಸಲಾಗಿದೆ ಕೋವಿಡ್ ಸಂಬಂಧಿಸಿದಂತೆ ನಿನ್ನೆ ನಡೆದ ಸಭೆಯಲ್ಲಿ ಮುನ್ನೆಚ್ಚರಿಕಾ ಬಗ್ಗೆ ಚರ್ಚಿಸಲಾಗಿದೆ. ನಾವು ಎಲ್ಲದ್ದಕ್ಕೂ ಸಿದ್ಧರಾಗಿರಬೇಕು. ವೆಂಟಿಲೇಟರ್, ಆಮ್ಲಜನಕ, ವಾರ್ಡ್ ಗಳಿಗೆ ತೊಂದರೆಯಾಗದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ಸೂಚಿಸಲಾಗಿದೆ. ಸುಮಾರು 65 ಇದ್ದ ಪ್ರಕರಣಗಳು 80 ಆಗಿವೆ. ಇದು ಗಂಭೀರವಾದ ತಳಿಯಲ್ಲ. ನೆಗಡಿ, ಕೆಮ್ಮು, ಜ್ವರ ಬಂದಿರುವ ಮಕ್ಕಳನ್ನು ಶಾಲೆಗೆ ಕಳುಹಿಸಬಾರದು ಹಾಗೂ ವೃದ್ಧರು, ವಿವಿಧ ಕಾಯಿಲೆಗಳಿಗೆ ತುತ್ತಾಗಿರುವವರು ಕಡ್ಡಾಯವಾಗಿ ಮಾಸ್ಕ್ ಧರಿಸಬೇಕು. ಲಸಿಕೆಗಳನ್ನು. ಮುನ್ನೆಚ್ಚರಿಕಾ ಕ್ರಮವಾಗಿ ಸಂಗ್ರಹಿಸಬೇಕು ಎಂದು ಸೂಚಿಸಲಾಗಿದೆ ಎಂದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T